ಸಂಪಾದಕರು:ಎಸ್.ಕೆ.ಒಡೆಯರ್ www.sahayavani.com

# ಸಹಾಯವಾಣಿ

SAHAYAVANI Kannada Daily, RNI:KARKAN/2014/54928,Bengaluru Editor:S.K.Wadeyar, ಕನ್ನಡ ದಿನಪತ್ರಿಕೆ

e-mail:sahayavany@gmail.com 9902543494--0803563144,

ಸಂಪುಟ:೧೦, ಸಂಚಿಕೆ:೧೭೮, ದಿನಾಂಕ:೧೧-೦೮-೨೦೨೩, ವಾರ:ಶುಕ್ರವಾರ, ಪುಟ:೪, ರೂ;೩/- ***** ಬೆಂಗಳೂರು ***** Vol:10, Issuse:178, Date:11-08-2023, FriDay, Page:4, Rs:3/-

## ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಅಧಿಕಾರೇತರ ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

ಶಿವಮೊಗ್ಗ, ಆಗಸ್ಟ್ ೧೦,: ಸಾಗರ ಉಪವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ(ದೌರ್ಜನ್ಯ ಪ್ರತಿಬಂಧ) ಸಮಿತಿಗೆ ಹೊಸದಾಗಿ ಅಧಿಕಾರೇತರ ಸದಸ್ಯರನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಸಮಿತಿಗೆ ಹೊಸದಾಗಿ ನೇಮಿಸಬಹುದಾದ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ (ಮಹಿಳೆಯರನ್ನು ಒಳಗೊಂಡಂತೆ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಾಂಗದ ಪರವಾಗಿ ಧ್ವನಿ ಎತ್ತಿ ನ್ಯಾಯ ಒದಗಿಸಬಲ್ಲಂತಹ(ನಾಯಕರು/ಹೋರಾಟಗಾರರು/ಚಿಂತಕರು) ಇಬ್ಬರು ಅಧಿಕಾರೇತರ ಸದಸ್ಯರನ್ನು ಮತ್ತು ಸರ್ಕಾರೇತರ ಸಂಸ್ಥೆಗಳೊಂದಿಗೆ ಸಂಪರ್ಕ ಹೊಂದಿರದ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟು ಅಲ್ಲದ ಇತರೆ ಪ್ರವರ್ಗಕ್ಕೆ ಸೇರಿದ ಎನ್‌ಜಿಓ ಅಧಿಕಾರೇತರ ಇಬ್ಬರು ಸದಸ್ಯರನ್ನು ಆಯ್ಕೆ ಮಾಡಲು ನಿಗದಿತ ನಮೂನೆಯನ್ನು ಪಡೆದು ಸಮಾಜ ಕಲ್ಯಾಣ ಇಲಾಖೆ, ಸಹಾಯಕ ನಿರ್ದೇಶಕರ ಕಚೇರಿ(ಗ್ರೇಡ್-೨), ಜೋಗ್ ರೋಡ್, ಸಾಗರ, ಶಿವಮೊಗ್ಗ ಜಿಲ್ಲೆ ಈ ಕಚೇರಿಗೆ ದಿ: ೨೪-೦೮-೨೦೨೩ ರೊಳಗೆ ಸಲ್ಲಿಸಬಹುದು. ಹಾಗೂ ಹೆಚ್ಚಿನ ಮಾಹಿತಿಗೆ ಈ ಕಚೇರಿಯನ್ನು ಸಂಪರ್ಕಿಸಬಹುದೆಂದು ಸಾಗರ ಸಹಾಯಕ ನಿರ್ದೇಶಕರು(ಗ್ರೇಡ್-೨) ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

ಶಿವಮೊಗ್ಗ, ಆಗಸ್ಟ್ ೧೦,: ಶಿವಮೊಗ್ಗ ತಾಲ್ಲೂಕಿನ ಆಯನೂರು ಗ್ರಾಮದಲ್ಲಿ ಹೊಸದಾಗಿ ನಿರ್ಮಾಣಗೊಳ್ಳುತ್ತಿರುವ ೧೧೦/೧೧ ಕೆವಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಟ್ಯಾಪಿಂಗ್ ಗೋಪುರದ ಅಳವಡಿಕೆ ಕಾರ್ಯ ಇರುವುದರಿಂದ ೧೧೦/೧೧ ಕೆವಿ ಕುಂಸಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಪಡೆಯುವ ಕೆಳಕಂಡ ಗ್ರಾಮಗಳಲ್ಲಿ

ದಿ: ೧೧-೦೮-೨೦೨೩ ಮತ್ತು ೧೨-೦೮-೨೦೨೩ ರಂದು ಬೆಳಿಗ್ಗೆ ೯ ರಿಂದ ಸಂಜೆ ೬ ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಕುಂಸಿ, ಬಾಳೆಕೊಪ್ಪ, ಚೋರಡಿ, ತುಪ್ಪೂರು,

ಕೋಣೆಹೊಸೂರು, ಹೊರಬೈಲು ಸುತ್ತಮುತ್ತ ಗ್ರಾಮಗಳು, ಹಾರ್ನಳ್ಳಿ, ರಾಮನಗರ, ಮುದುವಾಲ, ಯಡವಾಲ, ದೇವಬಾಳು, ತ್ಯಾಜವಳ್ಳಿ, ಕೊನಗವಳ್ಳಿ, ಹಿಟ್ಟೂರು, ನಾರಾಯಣಪುರ, ಮಲ್ಲಾಪುರ, ರಟ್ಟೆಹಳ್ಳಿ, ಸುತ್ತುಕೋಟೆ ಸುತ್ತಮುತ್ತ ಗ್ರಾಮಗಳು ಹಾಗೂ ಆಯನೂರು, ಮಂಡಘಟ್ಟ, ಸಿರಿಗೆರೆ, ಸೂಡೂರು, ಕೂಡಿ, ಮಲೆಶಂಕರ, ದೊಡ್ಡಮತ್ತಲಿ, ತಮ್ಮಡಿಹಳ್ಳಿ ಇನ್ನಿತರೆ ಸುತ್ತಮುತ್ತಲಿನ ಗ್ರಾಮಗಳ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಮಳೆ ಪ್ರಮಾಣ ಮತ್ತು ಜಲಾಶಯ ಮಟ್ಟ

ಶಿವಮೊಗ್ಗ : ಆಗಸ್ಟ್ ೧೦: : ಜಿಲ್ಲೆಯಲ್ಲಿ ಕಳೆದ ೨೪ ಗಂಟೆಗಳ ಅವಧಿಯಲ್ಲಿ ಒಟ್ಟು ೧೧.೦೦ ಮಿಮಿ ಮಳೆಯಾಗಿದ್ದು, ಸರಾಸರಿ ೧.೫೬ ಮಿಮಿ ಮಳೆ ದಾಖಲಾಗಿದೆ. ಆಗಸ್ಟ್ ತಿಂಗಳ ಸಾಮಾನ್ಯ ವಾಡಿಕೆ ಮಳೆಯ ಸರಾಸರಿ ಪ್ರಮಾಣ ೪೦೪.೮೬ ಮಿಮಿ ಇದ್ದು, ಇದುವರೆಗೆ ಸರಾಸರಿ ೫೫.೯೦ ಮಿಮಿ ಮಳೆ ದಾಖಲಾಗಿದೆ.


ಶಿವಮೊಗ್ಗ ೦.೧೦ ಮಿಮಿ., ಭದ್ರಾವತಿ ೦.೬೦ ಮಿಮಿ., ತೀರ್ಥಹಳ್ಳಿ ೧.೮೦ ಮಿಮಿ., ಸಾಗರ ೧.೬೦ ಮಿಮಿ., ಶಿಕಾರಿಪುರ ೦.೧೦ ಮಿಮಿ., ಸೊರಬ ೦.೪೦ ಮಿಮಿ. ಹಾಗೂ ಹೊಸನಗರ ೬.೨೦ ಮಿಮಿ. ಮಳೆಯಾಗಿದೆ.

ಜಲಾಶಯಗಳ ನೀರಿನ ಮಟ್ಟ ಅಡಿಗಳಲ್ಲಿ ಮತ್ತು ಹರಿವು ಕ್ಯೂಸೆಕ್ಸ್‌ಗಳಲ್ಲಿ: ಜಿಲ್ಲೆಯ ಲಿಂಗನಮಕ್ಕಿ: ೧೮೧೯ (ಗರಿಷ್ಠ), ೧೭೯೦.೭೦ (ಇಂದಿನ ಮಟ್ಟ), ೭೯೧೬.೦೦ (ಒಳಹರಿವು), ೬೧೩೫.೯೦ (ಹೊರಹರಿವು), ಕಳೆದ ವರ್ಷ ನೀರಿನ ಮಟ್ಟ ೧೮೦೬.೭೦. ಭದ್ರಾ: ೧೮೬ (ಗರಿಷ್ಠ), ೧೬೬.೯೦ (ಇಂದಿನ ಮಟ್ಟ), ೪೧೧೮.೦೦ (ಒಳಹರಿವು), ೧೯೪.೦೦ (ಹೊರಹರಿವು), ಕಳೆದ ವರ್ಷ ನೀರಿನ ಮಟ್ಟ ೧೮೨.೯೦. ತುಂಗಾ: ೫೮೮.೨೪ (ಗರಿಷ್ಠ), ೫೮೮.೨೪ (ಇಂದಿನ ಮಟ್ಟ), ೮೧೩೯.೦೦ (ಒಳಹರಿವು), ೮೧೩೯.೦೦ (ಹೊರಹರಿವು) ಕಳೆದ ವರ್ಷ ನೀರಿನ ಮಟ್ಟ ೫೮೮.೨೪. ಮಾಣಿ: ೫೯೫

(ಎಂಎಸ್‌ಎಲ್‌ಗಳಲ್ಲಿ), ೫೮೧.೪೬ (ಇಂದಿನ ಮಟ್ಟ ಎಂ.ಎಸ್.ಎಲ್‌ನಲ್ಲಿ), ೬೯೩ (ಒಳಹರಿವು), ೫೯೬.೦೦ (ಹೊರಹರಿವು ಕ್ಯೂಸೆಕ್ಸ್‌ಗಳಲ್ಲಿ) ಕಳೆದ ವರ್ಷ ನೀರಿನ ಮಟ್ಟ ೫೮೬.೮೦ (ಎಂಎಸ್‌ಎಲ್‌ಗಳಲ್ಲಿ). ಪಿಕ್‌ಅಪ್: ೫೬೩.೮೮ (ಎಂಎಸ್‌ಎಲ್‌ಗಳಲ್ಲಿ), ೫೬೧.೩೦ (ಇಂದಿನ ಮಟ್ಟ ಎಂ.ಎಸ್.ಎಲ್‌ನಲ್ಲಿ), ೩೪೪೦ (ಒಳಹರಿವು),

೨೮೩೪.೦೦(ಹೊರಹರಿವು ಕ್ಯೂಸೆಕ್ಸ್‌ಗಳಲ್ಲಿ), ಕಳೆದ ವರ್ಷ ನೀರಿನ ಮಟ್ಟ ೫೬೨.೯೬ (ಎಂಎಸ್‌ಎಲ್‌ಗಳಲ್ಲಿ). ಚಕ್ರ: ೫೮೦.೫೭ (ಎಂ.ಎಸ್.ಎಲ್‌ಗಳಲ್ಲಿ), ೫೭೦.೩೪ (ಇಂದಿನ ಮಟ್ಟ ಎಂ.ಎಸ್.ಎಲ್‌ನಲ್ಲಿ), ೨೧೯.೦೦ (ಒಳಹರಿವು), ೧೪೩೯.೦೦ (ಹೊರಹರಿವು ಕ್ಯೂಸೆಕ್ಸ್‌ಗಳಲ್ಲಿ), ಕಳೆದ ವರ್ಷ ನೀರಿನ ಮಟ್ಟ ೫೭೪.೮೦ (ಎಂಎಸ್‌ಎಲ್‌ಗಳಲ್ಲಿ). ಸಾವೆಹಕ್ಲು: ೫೮೩.೭೦ (ಗರಿಷ್ಠ ಎಂಎಸ್‌ಎಲ್‌ಗಳಲ್ಲಿ), ೫೭೭.೩೬ (ಇಂದಿನ ಮಟ್ಟ ಎಂ.ಎಸ್.ಎಲ್‌ನಲ್ಲಿ), ೪೭೮.೦೦ (ಒಳಹರಿವು), ೧೩೨೫.೦೦ (ಹೊರಹರಿವು ಕ್ಯೂಸೆಕ್ಸ್‌ಗಳಲ್ಲಿ), ಕಳೆದ ವರ್ಷ ನೀರಿನ ಮಟ್ಟ ೫೭೭.೩೮ (ಎಂಎಸ್‌ಎಲ್‌ಗಳಲ್ಲಿ).

## 'ಮುಖ್ಯಮಂತ್ರಿಗಳ ಪರಿಹಾರ ನಿಧಿ'ಗೆ ನಾಲ್ಕು ಕೋಟಿ ರೂಪಾಯಿಗಳ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರ



ಕರ್ನಾಟಕ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ ೩ ಕೋಟಿ ರೂ. ಮತ್ತು ಕರ್ನಾಟಕ ರಾಜ್ಯ ಮಾರುಕಟ್ಟೆ ಸಂವಹನ ಹಾಗೂ ಜಾಹೀರಾತು ಸಂಸ್ಥೆ (ಎಂಸಿಎ) ವತಿಯಿಂದ ೧ ಕೋಟಿ ರೂ.ಗಳ ಚೆಕ್ ಅನ್ನು 'ಮುಖ್ಯಮಂತ್ರಿಗಳ ಪರಿಹಾರ ನಿಧಿ'ಗೆ ನೀಡಲಾಯಿತು. ಈ ಸಂಸ್ಥೆಗಳ ಅಧ್ಯಕ್ಷರೂ ಆದ ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ನಾಲ್ಕು ಕೋಟಿ ರೂಪಾಯಿಗಳ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಿದರು.

ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೆಎಸ್‌ಐಐಡಿಸಿ ವ್ಯವಸ್ಥಾಪಕ ನಿರ್ದೇಶಕ ಡಾ.ಎಂ.ಆರ್.ರವಿ, ಎಂಸಿಎ ವ್ಯವಸ್ಥಾಪಕ ನಿರ್ದೇಶಕ ಸಿದ್ಧಲಿಂಗಪ್ಪ ಜಿ.ಪೂಜಾರ ಸೇರಿದಂತೆ ಇತರ ಅಧಿಕಾರಿಗಳು ಈ ವೇಳೆ ಹಾಜರಿದ್ದರು.

## ಜಿಲ್ಲಾಧಿಕಾರಿ ಡಾ.ಕುಮಾರ ಅವರು ಇಂದು ಮಂಡ್ಯ ಉಪವಿಭಾಗೀಯ ಕಚೇರಿ ಹಾಗೂ ತಾಲೂಕು ಕಚೇರಿಗೆ ದಿಢೀರ್ ಭೇಟಿ

ಮಂಡ್ಯ: ಜಿಲ್ಲಾಧಿಕಾರಿ ಡಾ.ಕುಮಾರ ಅವರು ಇಂದು ಮಂಡ್ಯ ಉಪವಿಭಾಗೀಯ ಕಚೇರಿ ಹಾಗೂ ತಾಲೂಕು ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆರ್ ಟಿ ಸಿ ತಿದ್ದುಪಡಿ, ಸರ್ವೆ ಇಲಾಖೆ ಹಾಗೂ ಕೋರ್ಟ್ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಪರಿಶೀಲನೆ ಮಾಡಿ ಸ್ವತಃ ಖುದ್ದು ಕಡತ ಪರಿಶೀಲನೆ ಮಾಡಿದರು.

ನಂತರ ಮಾತನಾಡಿದ ಜಿಲ್ಲಾಧಿಕಾರಿಗಳು ಕಂದಾಯ ಇಲಾಖೆಯಲ್ಲಿ ಸಾರ್ವಜನಿಕರಿಗೆ ಸಮಸ್ಯೆ ಆಗಬಾರದು. ಕಾನೂನು ವ್ಯಾಪ್ತಿಯಲ್ಲಿ ಯಾವುದನ್ನು ಅತಿ ತುರ್ತಾಗಿ ಮಾಡಬೇಕು ಅದನ್ನು ಖಂಡಿತವಾಗಿಯೂ ಮಾಡುತ್ತೇನೆ. ತಹಶೀಲ್ದಾರ್ ಹೊಸದಾಗಿ ಬಂದಿರುವುದರಿಂದ ಇಲ್ಲಿಯ ಕೆಲಸಗಳ ಬಗ್ಗೆ ತಿಳಿದುಕೊಳ್ಳಲು ಅವರಿಗೂ ಸ್ವಲ್ಪ ಕಾಲಾವಕಾಶ ಬೇಕಾಗುತ್ತದೆ ಪ್ರಾರಂಭದಲ್ಲಿ ಅವರಿಗೂ ಸ್ವಲ್ಪ ತೊಡಕುಗಳು



ಉಂಟಾಗಿರುತ್ತವೆ, ಆದರೂ ಸಹ ಕಾನೂನು ವ್ಯಾಪ್ತಿಗೆ ಒಳಪಡುವ ಎಲ್ಲಾ ಕೆಲಸಗಳನ್ನು ಹಾಗೂ ಉಳಿದಿರುವ ಎಲ್ಲಾ ಕೆಲಸಗಳನ್ನು ತುರ್ತಾಗಿ ಮಾಡಲು ಆದೇಶ ಮಾಡಿದ್ದೇನೆ ಎಂದರು.

ಈ ಹಿಂದೆ ಕೈ ಬರವಣಿಗೆ ಆರ್‌ಟಿಸಿ ಹಾಗೂ ಕೆಲವು ದಾಖಲೆಗಳ ಮೇಲೆ ತಿದ್ದುಪಡಿಗಳಾಗಿದ್ದರೆ ಅದರ ಬಗ್ಗೆ ಪರಿಶೀಲನೆ ಮಾಡಿ ತಹಶೀಲ್ದಾರ್ ಹಾಗೂ ಎಸಿ ಕೋರ್ಟ್ ನಲ್ಲಿ ಇತ್ಯರ್ಥ ಆಗಬೇಕು. ಅಂತಹ ಪ್ರಕರಣಗಳು ಯಾವುದಾದರು ಇದ್ದರೆ ನಾನು ತಕ್ಷಣ ಅದನ್ನು ಪರಿಶೀಲನೆ ಮಾಡಿಸುತ್ತೇನೆ ಎಂದು ತಿಳಿಸಿದರು.

ಕಂದಾಯ ಇಲಾಖೆ ಹಾಗೂ ಎಸಿ ಕಚೇರಿಗೆ ಭೇಟಿ ಕೊಡುವ ಯಾವುದೇ ಸಾರ್ವಜನಿಕರು ಮಧ್ಯವರ್ತಿಗಳನ್ನು ಸಂಪರ್ಕಿಸಬಾರದು ಯಾವುದೇ ಕೆಲಸವಿದ್ದರೂ ನೇರವಾಗಿ ತಹಶೀಲ್ದಾರ್ ತಾಲೂಕು ದಂಡಾಧಿಕಾರಿಗಳನ್ನು ಭೇಟಿ ಮಾಡಿ ತಮ್ಮ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಕಂದಾಯ ಅಧಿಕಾರಿಗಳು ಹಾಗೂ ಗ್ರಾಮ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಳದಲ್ಲಿ ಇಲ್ಲದಿರುವುದು ಗಮನಕ್ಕೆ ಬಂದಿದೆ, ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು. ಅತೀವೃಷ್ಠಿ- ಅನಾವೃಷ್ಠಿ ಪ್ರಕೃತಿ ವಿಕೋಪಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ನೀಡಲಾಗುವ ಪರಿಹಾರವನ್ನು ಪಾವತಿಸಲು ಸರಿಯಾದ ಮಾಹಿತಿಯನ್ನು ನಗದಿತ ಸಮಯದೊಳಗೆ ಸಂಬಂಧಿಸಿದ ಅಧಿಕಾರಿಗಳು/ಸಿಬ್ಬಂದಿಗಳು ಸರ್ಕಾರದ ನಿರ್ದೇಶನದಂತೆ ಕ್ರಮವಹಿಸಬೇಕು. ಮನೆಹಾನಿ ಬೆಳೆಹಾನಿ ಕುರಿತಂತೆ ಪರಿಹಾರ ಪಾವತಿಯಾಗದಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮುನ್ನ ತಾಲ್ಲೂಕು ಕಚೇರಿಯಲ್ಲಿ ನರೆದಿದ್ದ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ, ಕೆಲವೊಂದನ್ನು ಸ್ಥಳದಲ್ಲೇ ಪರಿಹರಿಸಿದರು.

ಇದೇ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಶಿವಮೂರ್ತಿ, ತಹಶೀಲ್ದಾರ್ ಶಿವಕುಮಾರ್ ಬಿರಾದಾರ್ ಇದ್ದರು.

## ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ, ಆಗಸ್ಟ್ ೦೯, : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ ಭಾರತ ಸರ್ಕಾರವು ೨೦೨೩ ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ರಾಷ್ಟ್ರಾದ್ಯಂತ ಅರ್ಜಿ ಆಹ್ವಾನಿಸಿದೆ. ಗ್ರಾಮ ಪಂಚಾಯಿತಿ ಹಾಗೂ ಜಿಲ್ಲಾ ಮಟ್ಟದಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಅವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ ಮಕ್ಕಳು ಆ.೩೧ ರೊಳಗೆ ಅರ್ಜಿಯನ್ನು ಆನ್‌ಲೈನ್ https://awards.gov.in ಮೂಲಕ ಅರ್ಜಿ ಸಲ್ಲಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ೩೩ನೇ ಗಾಳಿಪಟ ಉತ್ಸವಕ್ಕೆ ಸಕಲ ಸಿದ್ಧತೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಜಾನಪದ ಪರಿಷತ್ತು ಬೆಂಗಳೂರು ಹಾಗೂ ಮಂಡ್ಯ ಜಿಲ್ಲಾ ಘಟಕದ ಸಹಯೋಗದೊಂದಿಗೆ ಆಗಸ್ಟ್ ೧೩ ರಂದು ಬೆಳಿಗ್ಗೆ ೧೦:೩೦ ಗಂಟೆಗೆ ಆದಿ ಚುಂಚನಗಿರಿಯ ಬಿ.ಜಿ.ಎಸ್ ಕ್ರೀಡಾಂಗಣದಲ್ಲಿ ೩೩ ನೇ ರಾಜ್ಯ ಮಟ್ಟದ ಗಾಳಿಪಟ ಉತ್ಸವ ನಡೆಯಲಿದ್ದು, ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಪಾಂಡವಪುರ ಉಪವಿಭಾಗಾಧಿಕಾರಿ ನಂದೀಶ್ ಅವರು ತಿಳಿಸಿದರು.

ಅವರು ಇಂದು ಆದಿಚುಂಚನಗಿರಿಯ ಬಿ.ಜಿ.ಎಸ್ ಸಭಾಂಗಣದಲ್ಲಿ ೩೩ ನೇ ರಾಜ್ಯ ಮಟ್ಟದ ಗಾಳಿಪಟ ಉತ್ಸವದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

೨೫೦ ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸುವ ನಿರೀಕ್ಷೆ ಇದ್ದು, ಅಂದು ಬೆಳಗ್ಗೆ ೯ ಗಂಟೆಗೆ ನೋಂದಣಿ ಪ್ರಾರಂಭವಾಗಬೇಕು. ಉತ್ಸವದಲ್ಲಿ ಕಲಾ ತಂಡಗಳು ಭಾಗವಹಿಸಿ ವಿಶೇಷ ಮೇರಗು ನೀಡಲಿದೆ ಎಂದರು.

ಸಾರ್ವಜನಿಕರಿಗೆ ಮಾಹಿತಿ ನೀಡುವ ವಸ್ತು ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗುವುದು. ಗಾಳಿಪಟ ಸಿದ್ಧಪಡಿಸುವ ಬಗ್ಗೆ ಪ್ರಾತ್ಯಕ್ಷಿಕೆ ನಡೆಯಲಿದೆ. ವಸತಿ, ಊಟದ ವ್ಯವಸ್ಥೆ, ವಾಹನ



ನಿಲುಗಡೆ, ಸ್ವಚ್ಚತೆ, ಕುಡಿಯುವ ನೀರಿನ ವ್ಯವಸ್ಥೆಯು ವ್ಯವಸ್ಥಿತವಾಗಿ ನಡೆಯಬೇಕು ಎಂದರು. ಕರ್ನಾಟಕ ಜಾನಪದ ಪರಿಷತ್ತಿನ ಜಿಲ್ಲಾದ್ಯಕ್ಷ ಡಿ.ಪಿ ಸ್ವಾಮಿ ಅವರು ಮಾತನಾಡಿ ಗಾಳಿಪಟ ನಮ್ಮ ಸಂಸ್ಕೃತಿಯ ಒಂದು ಭಾಗವಾಗಿದ್ದು, ಇದನ್ನು ಮಕ್ಕಳು ಹಾಗೂ ಯುವ ಪೀಳಿಗೆಗೆ ಪರಿಚಯಿಸಿ ಉಳಿಸಬೇಕಾಗಿದೆ ಎಂದರು.

ಅಂತರಾಷ್ಟ್ರೀಯ ಖ್ಯಾತಿಯ ವಿ.ಕೆ ರಾವ್ ಮತ್ತು ತಂಡದವರು ಭಾಗವಹಿಸಿ ವೈವಿದ್ಯಮಯ ಹಾಗೂ ಸಮಾಜಿಕ ಕಳಕಳಿಯ ಸಂದೇಶ ಸಾರುವ ಗಾಳಿಪಟಗಳನ್ನು ಹಾರಿಸಲಿದ್ದಾರೆ ಎಂದು ಜಾನಪದ ಲೋಕದ ಕ್ಯೂರೇಟರ್ ಡಾ.ರವಿ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ೩೩ ನೇ ರಾಜ್ಯ ಮಟ್ಟದ ಗಾಳಿಪಟ ಉತ್ಸವದ ಪೋಸ್ಟರ್ ಬಿಡುಗಡೆ ಮಾಡಿದರು.

ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ರಂಗಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸಿದ್ದಲಿಂಗೇಶ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಹರ್ಷ, ಪೊಲೀಸ್ ಅಧಿಕಾರಿ ನಿರಂಜನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಎಸ್ ಹೆಚ್ ನಿರ್ಮಲ ಸೇರಿದಂತೆ ಇನ್ನಿತರರು ಹಾಜರಿದ್ದರು.

## ಸ್ವಾತಂತ್ರ್ಯ ದಿನಾಚರಣೆ-೨೦೨೩

ಶಿವಮೊಗ್ಗ, ಆಗಸ್ಟ್ ೧೦,: ಜಿಲ್ಲಾ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಗಸ್ಟ್ ೧೫ ರ ಮಂಗಳವಾರ ಬೆಳಿಗ್ಗೆ ೯ ಗಂಟೆಗೆ ಸಾಗರ ರಸ್ತೆಯ ಡಿಎಆರ್ ಪೊಲೀಸ್‌ಪೆರೇಡ್ ಮೈದಾನದಲ್ಲಿ ಸ್ವಾತಂತ್ರ್ಯ ದಿನಾಚರಣೆ ಧ್ವಜಾರೋಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪನವರು ಧ್ವಜಾರೋಹಣ ನೆರವೇರಿಸುವರು. ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಮಲೆನಾಡು ಪ್ರದೇಶ ಅಭಿವೃದ್ದಿ ಮಂಡಳಿ ಅಧ್ಯಕ್ಷರಾದ ಡಿ.ಸುಧಾಕರ್ ಇವರ ಗೌರವ ಉಪಸ್ಥಿತಿ ಇರಲಿದೆ. ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿಧಿನಿಗಳು ಪಾಲ್ಗೊಳ್ಳುವರು.

ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಓ, ಪಾಲಿಕೆ ಆಯುಕ್ತರು, ಸರ್ಕಾರಿ ಅಧಿಕಾರಿ/ ನೌಕರರು, ಸಾರ್ವಜನಿಕರು ಪಾಲ್ಗೊಳ್ಳುವರು. ಅಂದು ಸಂಜೆ ೫ ಗಂಟೆಗೆ ಅಂಬೇಡ್ಕರ್ ಭವನದಲ್ಲಿ ನಗರದ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

## ಕೊಲೆ ಆರೋಪಿಗಳಿಗೆ ಕಾರಾಗೃಹವಾಸ ಶಿಕ್ಷೆ-ದಂಡ

ಶಿವಮೊಗ್ಗ, ಆಗಸ್ಟ್ ೧೦, : ಹೆಂಡತಿ ಹಾಗೂ ಆಕೆಯ ಪ್ರೇಮಿಯನ್ನು ಕೊಲೆ ಮಾಡಿದ ಗಂಡ ಮತ್ತು ಆತನ ಗೆಳೆಯರಿಗೆ ೩ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಜೀವಾವಧಿ ಕಾರಾಗೃಹ ವಾಸ ಶಿಕ್ಷೆ ಮತ್ತು ತಲಾ ರೂ.೧ ಲಕ್ಷ ದಂಡ ವಿಧಿಸಿ ತೀರ್ಪು ನೀಡಿದೆ.

ಶಿವಮೊಗ್ಗ ನಗರದ ವೆಂಕಟೇಶ್ವರ ನಗರದ ೫ನೇ ಕ್ರಾಸ್ ನಿವಾಸಿ ಕೃಷ್ಣಮೂರ್ತಿರವರ ಮಗ ಕಾರ್ತಿಕ್ ಕೆ ವಯಸ್ಸು ೨೮ ವರ್ಷ ಇವರು ಶ್ರೀರಾಮನಗರದ ವಾಸಿ ಆರ್.ಪೊನ್ನುಸ್ವಾಮಿ ಇವರ ಸಾಕುಮಗಳು ರೇವತಿ, ೨೧ ವರ್ಷ ಶಿವಮೊಗ್ಗ ಇವರನ್ನು ದಿನಾಂಕ: ೦೪-೦೯-೨೦೧೬ ರಂದು ಮದುವೆಯಾಗಿದ್ದರು.

ಪತ್ನಿ ರೇವತಿ ಕಾರ್ತಿಕನೊಂದಿಗೆ ಜಗಳ ಆಡಿಕೊಂಡು ಮನೆ ಬಿಟ್ಟು ಹೋಗಿದ್ದಳು. ತನ್ನ ಪತ್ನಿ ರೇವತಿಯು ತನ್ನ ಮನೆಯ ಎದುರು ಇರುವ ವಿಜಯ ಎಂಬುನನ್ನು ಪ್ರೀತಿಸುತ್ತಿದ್ದರಿಂದ ಮನೆ ಬಿಟ್ಟು ಹೋಗಿರುತ್ತಾಳೆಂದು ಆರೋಪಿ ಕಾರ್ತಿಕ ತನ್ನ ಗೆಳೆಯರಾದ ೨ನೇ ಆರೋಪಿ ಭರತ್ ವಿ, ೨೩ ವರ್ಷ, ೩ನೇ ಆರೋಪಿ ಸತೀಶ್ ೨೬ ವರ್ಷ ಮತ್ತು ೪ನೇ ಆರೋಪಿ ಸಂದೀಪ ೨೧ ವರ್ಷ ಇವರೊಂದಿಗೆ ಸೇರಿಕೊಂಡು ತನ್ನ ಪತ್ನಿ ಮತ್ತು ವಿಜಯನನ್ನು ವಡ್ಡಿನಕೊಪ್ಪಕ್ಕೆ ಕರೆಸಿಕೊಂಡು ಮಚ್ಚು, ಲಾಂಗು ಮತ್ತು ಕಲ್ಲಿನಿಂದ ಕೊಲೆ ಮಾಡಿರುತ್ತಾರೆ.

ಈ ಬಗ್ಗೆ ಶಿವಮೊಗ್ಗ ತುಂಗಾ ನಗರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖಾಧಿಕಾರಿ ಮಹಾಂತೇಶ್ ಬಿ ಹೊಳಿ, ಪೊಲೀಸ್ ಸರ್ಕಲ್ ಇನ್ಸ್‌ಪೆಕ್ಟರ್ ರವರು ತನಿಖೆ ಪೂರೈಸಿ ಆರೋಪಿಗಳಾದ ಕಾರ್ತಿಕ್, ಭರತ್, ಸತೀಶ್, ಸಂದೀಪ್ ಇವರುಗಳ ವಿರುದ್ದ ಭಾ.ದಂ.ಸಂಹಿತೆ ಕಲಂ ೩೦೨, ೧೨೦(ಬಿ)ಸಹವಾಚಕ ೩೪ ರಡಿಯಲ್ಲಿ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಈ ಪ್ರಕರಣವು ಶಿವಮೊಗ್ಗದ ಮಾನ್ಯ ೩ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ದಾಖಲಾಗಿ ವಿಚಾರಣೆ ನಡೆದು, ಆರೋಪಗಳು ದೃಢಪಟ್ಟಿರುವುದರಿಂದ ಆರೋಪಿತರಿಗೆ ೧ನೇ ಮತ್ತು ೩ನೇ ಅಪರ ಜಿಲ್ಲಾ ಮತ್ತು ನ್ಯಾಯಾಧೀಶರಾದ ಕೆ.ಎಸ್. ಮಾನು ರವರು ಜೀವಾವಧಿ ಕಾರಾಗೃಹ ವಾಸ ಶಿಕ್ಷೆ ಹಾಗೂ ತಲಾ ಒಂದು ಲಕ್ಷ ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

ಈ ಪ್ರಕರಣದ ೩ನೇ ಆರೋಪಿ ಸತೀಶ್ ಬಿನ್ ಗೋವಿಂದರಾಜ ತಲೆಮರೆಸಿಕೊಂಡಿರುವುದರಿಂದ ಈತನನ್ನು ಪ್ರಕರಣದಿಂದ ಪ್ರತ್ಯೇಕಿಸಿ, ಪ್ರತ್ಯೇಕ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದು ಈತನ ಮೇಲಿನ ವಿಚಾರಣೆ ಬಾಕಿ ಇರುತ್ತದೆ.

ಸರ್ಕಾರಿ ಅಭಿಯೋಜಕರಾದ ಜೆ.ಶಾಂತರಾಜ್ ಸರ್ಕಾರದ ಪರವಾಗಿ ಸಾಕ್ಷಿಗಳ ವಿಚಾರಣೆ ಮಾಡಿ ವಾದವನ್ನು ಮಂಡಿಸಿದ್ದರೆಂದು ಪ್ರಕಟಣೆ ತಿಳಿಸಿದೆ.

## ಕಾಣೆಯಾದವರ ಪತ್ತೆಗಾಗಿ ಮನವಿ

ಬೆಂಗಳೂರು ನಗರ ಜಿಲ್ಲೆ, ಆಗಸ್ಟ್ ೧೦: ನಗರದ ವರ್ತೂರಿನ ಚೌಡೇಶ್ವರಿ ಬೀದಿಯ ನಿವಾಸಿಯಾದ ರತ್ನಮ್ಮ ಎಂಬುವರ ಮೊಮ್ಮಗಳು ಕು. ರಕ್ಷಿತಾ (೧೬ ವರ್ಷ) ಅವರು ಮಾರ್ಚ್ ೧೮




೨೦೨೩ ರಂದು ಬೆಳಿಗ್ಗೆ ೪ ಗಂಟೆಯಲ್ಲಿ ಮನೆಯಿಂದ ಹೊರಗೆ ಹೋದವರು ಇದುವರೆಗೂ ಮನೆಗೆ ಬಂದಿರುವುದಿಲ್ಲ. ಈ ಬಗ್ಗೆ ನಗರದ ವರ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದವರ ಚಹರೆ ಇಂತಿವೆ: ೫ ಅಡಿ ಎತ್ತರ, ಗೋದಿ ಮೈಬಣ್ಣ, ದುಂಡು ಮುಖ, ಕಪ್ಪು ತಲೆಕೂದಲು. ಕನ್ನಡ ಮತ್ತು ತೆಲುಗು ಭಾಷೆಗಳನ್ನು ಮಾತನಾಡುತ್ತಾಳೆ.

ಕಾಣೆಯಾದವರು ಪತ್ತೆಯಾದಲ್ಲಿ ವತ್ತೂರು ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು ಅಥವಾ ದೂರವಾಣಿ ಸಂಖ್ಯೆ: ೦೮೦-೨೮೫೩೯೧೯೬, ಮೊಬೈಲ್ ನಂ: ೯೪೮೦೮೦೧೬೧೮ ಅಥವಾ ಇ-ಮೇಲ್ varthurbcp@ksp.gov.in ವಿಳಾಸಕ್ಕೆ ಮಾಹಿತಿ ನೀಡಬೇಕೆಂದು ವರ್ತೂರು ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಮತ್ತು ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದವರ ಪತ್ತೆಗಾಗಿ ಮನವಿ

ಬೆಂಗಳೂರು ನಗರ ಜಿಲ್ಲೆ, ಆಗಸ್ಟ್ ೧೦: ನಗರದ ಬಳಗೆರೆ ನಿವಾಸಿಯಾದ ರೂಪದೇವಿ ಎಂಬುವರ ಮಗಳು ಕು. ಪಲ್ಲವಿ (೧೫ ವರ್ಷ) ಅವರು ಮಾರ್ಚ್ ೦೪ ೨೦೨೩ ರಂದು ಬೆಳಿಗ್ಗೆ



೮.೩೦ ಗಂಟೆಯಲ್ಲಿ ಶಾಲೆಗೆ ಹೋಗುವುದಾಗಿ ಹೇಳಿ ಮನೆಯಿಂದ ಹೊರಗೆ ಹೋದವರು ಇದುವರೆಗೂ ಮನೆಗೆ ಬಂದಿರುವುದಿಲ್ಲ. ಈ ಬಗ್ಗೆ ನಗರದ ವರ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದವರ ಚಹರೆ ಇಂತಿವೆ: ೪.೮ ಅಡಿ ಎತ್ತರ, ಗೋದಿ ಮೈಬಣ್ಣ, ಕೋಲು ಮುಖ, ಕಪ್ಪು ತಲೆಕೂದಲು. ಕನ್ನಡ ಮತ್ತು ಹಿಂದಿ ಭಾಷೆಗಳನ್ನು ಮಾತನಾಡುತ್ತಾಳೆ. ನೀಲಿ ಬಣ್ಣದ ಶಾಲಾ ಸಮವಸ್ತ್ರ ಧರಿಸಿರುತ್ತಾರೆ.

ಕಾಣೆಯಾದವರು ಪತ್ತೆಯಾದಲ್ಲಿ ವತ್ತೂರು ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು ಅಥವಾ ದೂರವಾಣಿ ಸಂಖ್ಯೆ: ೦೮೦-೨೮೫೩೯೧೯೬, ಮೊಬೈಲ್ ನಂ: ೯೪೮೦೮೦೧೬೧೮ ಅಥವಾ ಇ-ಮೇಲ್ varthurbcp@ksp.gov.in ವಿಳಾಸಕ್ಕೆ ಮಾಹಿತಿ ನೀಡಬೇಕೆಂದು ವರ್ತೂರು ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಮತ್ತು ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈಯಕ್ತಿಕ ಕಾಳಜಿಯೊಂದಿಗೆ ಮಕ್ಕಳಿಗೆ ಶಿಕ್ಷಣವನ್ನು ನೀಡಿದಾಗ ಮಾತ್ರ ಈ ದೇಶದ ಸತಪ್ರಜೆಗಳನ್ನು ತಯಾರುಮಾಡಲು ಸಾಧ್ಯ:ಎನ್.ಹೆಚ್.ನಾಗೂರ

ಕೊಲ್ಹಾರ ೧೦: ಶಿಕ್ಷಕರು ನಿರಂತರವಾಗಿ ಪಾಠ ಭೋದನೆಯಲ್ಲಿ ತೊಡಗಿ ಮಕ್ಕಳ ಸರ್ವಾಂಗೀಣ



ಅಭಿವೃದ್ಧಿಯನ್ನು ಮಾಡುವುದೇ ಶಿಕ್ಷಕರ ಮುಖ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ (ಆಡಳಿತ ) ಎನ್ ಎಚ್ ನಾಗೂರ ಹೇಳಿದರು.

ಪಟ್ಟಣದಲ್ಲಿ ಗುರುವಾರ ಸಂಗಮೇಶ್ವರ ಪದವಿ ಪೂರ್ವ ಕಾಲೇಜಿನ ಪ್ರೌಢ ಶಾಲೆಗೆ ಆಕಸ್ಮಿಕ ಭೇಟಿ ನೀಡಿ, ಮಕ್ಕಳ ಪ್ರಗತಿ ಪರಿಶೀಲನೆ ಮಾಡಿ, ಸಂಗಮೇಶ್ವರ ವಿದ್ಯಾ ವರ್ಧಕ ಸಂಘದ ವತಿಯಿಂದ ಕಟ್ಟಿದ ನೂತನ ಶಾಲಾ ಕಟ್ಟಡವನ್ನು ವೀಕ್ಷಣೆ ಮಾಡಿ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದ ಅವರು,ಪ್ರತಿ ಮಗು ಶಿಕ್ಷಣದಿಂದ ವಂಚಿತನಾಗಬಾರದು,ಮಕ್ಕಳ ಮಟ್ಟವನ್ನು ಗುರುತಿಸಿ ಅವರ ಮಟ್ಟಕ್ಕೆ ಅನಗುಣವಾಗಿ ಶಿಕ್ಷಣವನ್ನು ನೀಡಬೇಕು.ಶಿಕ್ಷಕರು ಮಕ್ಕಳನ್ನು ತಮ್ಮ ಮಕ್ಕಳಂತೆ ಪ್ರೀತಿಯಿಂದ ನೋಡಿಕೊಂಡು ವೈಯಕ್ತಿಕ ಕಾಳಜಿಯೊಂದಿಗೆ ಮಕ್ಕಳಿಗೆ ಶಿಕ್ಷಣವನ್ನು ನೀಡಿದಾಗ ಮಾತ್ರ ಈ ದೇಶದ ಸತಪ್ರಜೆಗಳನ್ನು ತಯಾರುಮಾಡಲು ಸಾಧ್ಯವಾಗುತ್ತದೆ. ಈ ಮೂಲಕ ಸರ್ಕಾರದ ಎಲ್ಲ ಯೋಜನೆಗಳನ್ನು ಮಕ್ಕಳಿಗೆ ತಲುಪಿಸಿ ಸಮರ್ಪಕ ಶಿಕ್ಷಣ ನೀಡಲು ಶಿಕ್ಷಕರಿಗೆ ಕರೆಯಿತ್ತರು.

ವಿಜಯಪುರ ಜಿಲ್ಲೆಯ ನೂತನ ಡಿ ಡಿ ಪಿ ಐ ಆಗಿ ಆಗಮಿಸಿ ಅಧಿಕಾರ ಸ್ವೀಕರಿಸಿ, ಕೊಲ್ಹಾರ ಪಟ್ಟಣಕ್ಕೆ ಆಕಸ್ಮಿಕವಾಗಿ ಮೊದಲ ಬಾರಿಗೆ ಆಗಮಿಸಿದ ಹಿನ್ನೆಲೆಯಲ್ಲಿ ಎನ್ ಎಚ್ ನಾಗೂರ ರವರನ್ನು ಸಂಗಮೇಶ್ವರ ಪದವಿ ಪೂರ್ವ ಕಾಲೇಜಿನ ಪ್ರೌಢ ಶಾಲಾ ವಿಭಾಗದ ಮುಖ್ಯ ಶಿಕ್ಷಕ ರಾಜಶೇಖರ ಉಮರಾಣಿ,ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಯಲ್ಲಪ್ಪ ಶಿರೋಳ ಹಾಗೂ ಸರ್ಕಾರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಎಮ್ ಎಮ್ ಗುಬ್ಬೆವಾಡಿ ಹಾಗೂ ಸಿಬ್ಬಂದಿ ವರ್ಗದವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಉಪನಿರ್ದೇಶಕರ ಕಾರ್ಯಾಲಯದ ವಿಜ್ಞಾನ ವಿಷಯ ಪರಿವೀಕ್ಷಕ ಎಸ್ ಎಸ್ ತಳೊಳ್ಳಿ,ಗಣಿತ ವಿಷಯ ಪರೀವೀಕ್ಷಕ ಸಿ ಎಚ್ ಬಿರಾದಾರ,ಕನ್ನಡ ವಿಷಯ ಪರಿವೀಕ್ಷಕಿ ಸುವರ್ಣಾ ಅಳ್ಳಗಿ ಇದ್ದರು.

## ಸ್ವಕ್ಷೇತ್ರ ಕೋಲ್ಹಾರ ಪುನರ್‌ವಸತಿ ಕೇಂದ್ರದಲ್ಲಿ ಸಚಿವ ಶಿವಾನಂದ ಪಾಟೀಲರು



**ಕೃಷ್ಣಾ ಮೇಲ್ದಂಡೆ ಯೋಜನೆ, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಸಂಬಂಧ ಪುನರ್ ವಸತಿ ಕೇಂದ್ರದಲ್ಲಿನ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನು ವಿಜಯಪುರ ಜಿಲ್ಲೆಯ ಸ್ವಕ್ಷೇತ್ರ ಕೋಲ್ಹಾರ ಪುನರ್‌ವಸತಿ ಕೇಂದ್ರದಲ್ಲಿ ಸಚಿವ ಶಿವಾನಂದ ಪಾಟೀಲರು ನಡೆಸಿದರು.**

## ಹರ್ ಘರ್ ತಿರಂಗ : ಪ್ರತಿ ಮನೆಯಲ್ಲೂ ತ್ರಿವರ್ಣ ಧ್ವಜ

ಶಿವಮೊಗ್ಗ, ಆಗಸ್ಟ್ ೦೯,: ಭಾರತೀಯ ಅಂಚೆ ಇಲಾಖೆಯು ಕಳೆದ ಸಾಲಿನಂತೆ ಈ ವರ್ಷವು ಸಹ ತ್ರಿವರ್ಣ ಧ್ವಜವನ್ನು ನಿಮ್ಮ ಮನೆ ಬಾಗಿಲಿಗೆ ತಲುಪಿಸುವ ಮಹತ್ವದ ಕಾರ್ಯವನ್ನು ಮಾಡಲಿದೆ.

೨೦೨೩ ನೇ ವರ್ಷದ ಸ್ವಾತಂತ್ರ್ಯ ದಿನವನ್ನು ಹೆಮ್ಮೆ ಮತ್ತು ದೇಶಭಕ್ತಿಯೊಂದಿಗೆ ಆಚರಿಸಲು ನಿಮ್ಮ ಸಮೀಪದ ಅಂಚೆ ಕಚೇರಿಯಲ್ಲಿ ಕೇವಲ ರೂ.೨೫/- ಪಾವತಿಸಿ ತ್ರಿವರ್ಣ ಧ್ವಜ ಪಡೆದುಕೊಳ್ಳಬಹುದು. ಆನ್‌ಲೈನ್ www.indiapost.gov.in ರಲ್ಲಿ ನೊಂದಣಿ ಮಾಡುವುದರ ಮೂಲಕ ಮನೆ ಬಾಗಿಲಿನಲ್ಲಿಯೇ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಮೀಪದ ಅಂಚೆ ಕಚೇರಿಯನ್ನು ಸಂಪರ್ಕಿಸುವಂತೆ ಅಂಚೆ ಅಧೀಕ್ಷಕರಾದ ಜಯರಾಮ ಶೆಟ್ಟಿ ಜಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ರಾಷ್ಟ್ರೀಯ ಸೇವಾ ಯೋಜನೆಯಿಂದ ಸಮಾಜದಲ್ಲಿ ಬದುಕುವ ಮಾರ್ಗತೋರಿಸಿ ಮನುಷ್ಯನನ್ನು ಉನ್ನತ ಮಟ್ಟಕ್ಕೆ ಬೆಳೆಯಲು ದಾರಿ ಮಾಡಿ ಕೊಡುತ್ತದೆ:ರಂಗಪ್ಪ ಗುಜನಟ್ಟಿ

ಮೂಡಲಗಿ:೮,೧೦-ಹಳ್ಳೂರ ಗ್ರಾಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯಿಂದ ಸಮಾಜದಲ್ಲಿ ಬದುಕುವ ಮಾರ್ಗ ತೋರಿಸಿ ಮನುಷ್ಯನನ್ನು ಉನ್ನತ ಮಟ್ಟಕ್ಕೆ ಬೆಳೆಯಲು ದಾರಿ ಮಾಡಿಕೊಡುತ್ತದೆಂದು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ರಂಗಪ್ಪ ಗುಜನಟ್ಟಿ ಹೇಳಿದರು. ಅವರು ಹಳ್ಳೂರ ಗ್ರಾಮದಲ್ಲಿ ೭ ದಿನಗಳ ಕಾಲ ನಡೆದ ಮೂಡಲಗಿ ಕಲಾ ವಾಣಿಜ್ಯ ವಿಜ್ಞಾನ ಮತ್ತು ಸಮಾಜ ಕಾರ್ಯ ಮಹಾವಿದ್ಯಾಲಯದಿಂದ ಹಮ್ಮಿಕೊಂಡ ರಾಷ್ಟ್ರೀಯ ಸೇವಾ ಯೋಜನೆ ಸಮಾರೋಪ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳು ಪಠ್ಯ ಪುಸ್ತಕ ಜೊತೆಗೆ ಪಟ್ಯೇತರ ಚಟುವಿಕೆಗಳಲ್ಲಿ ಭಾಗವಹಿಸುವುದರಿಂದ ಶಾರೀರಿಕ ಹಾಗೂ ಮಾನಸಿಕ ನೆಮ್ಮದಿ ದೊರೆಯುತ್ತದೆ ಎಂದು ಹೇಳಿದರು.ಶಿಕ್ಷಕ ವಾಯ್ ಬಿ ಕಳ್ಳಿಗುದ್ದಿ ಮಾತನಾಡಿ ನಿಮ್ಮ ಜೀವನ ನಿಮ್ಮ ಕೈಯಲ್ಲಿದೆ ಒಳ್ಳೆಯ ಜೀವನ ರೂಪಿಸಿಕೊಳ್ಳಿ. ಕೇವಲ ಶಿಕ್ಷಣ ಕಲಿತರೆ ಸಾಲದು ಬದುಕುವ ಹವ್ಯಾಸ ಬೆಳೆಸಿಕೊಳ್ಳಬೇಕು. ಮನೆ ಅಷ್ಟೇ ನಡೆಸುವುದು ಸರಿಯಲ್ಲ ಬೇರೆಯವರಿಗೆ ಸಹಾಯ ಸಹಕಾರ ನೀಡುವ ಮನೋಭಾವನೆ ಬೆಳೆಸಿಕೊಂಡು ದೇಶ ಕಟ್ಟುವ ಆದರ್ಶ ನಾಯಕರಾಗಬೇಕು. ದೇಶ, ಸಮಾಜ ಸೇವೆ ಮಾಡಿ ಸಾಕಷ್ಟು ಜನ ಸಮಾಜದಲ್ಲಿ ಉನ್ನತ ಮಟ್ಟದ ಸ್ಥಾನ ಮಾನವನ್ನು ಪಡೆದಿದ್ದಾರೆ. ಸಮಾಜ ಸೇವಕ ಮುರಿಗೆಪ್ಪ ಮಾಲಗಾರ ಮಾತನಾಡಿ ರಾಷ್ಟ್ರೀಯ ಸೇವಾ ಯೋಜನೆಯಿಂದ ಮೇಲು ಕೀಳೆಂಬ ಭಾವನೆ ಬಿಟ್ಟು



ಎಲ್ಲರೂ ಒಂದಾಗಿ ಬಾಳಬೇಕು ಎಂದು ತೋರಿಸಿ ಮನುಷ್ಯನನ್ನು ಉನ್ನತ ಮಟ್ಟಕ್ಕೆ ಬೆಳೆಯಲು ಅವಕಾಶ ಮಾಡಿಕೊಡುತ್ತದೆ. ಯುವಕರು ಮೊಬೈಲ್, ಗುಟ್ಕಾ ದಂತ ಮಾದಕ ವಸ್ತುಗಳ ದಾಸರಾಗದೆ ಒಳ್ಳೆಯ ಶಿಕ್ಷಣ ಕಲಿತು ಉನ್ನತ ಮಟ್ಟದ ಸ್ಥಾನ ಮಾನವನ್ನು ಪಡೆಯಿರಿ. ಸಮಾಜದಲ್ಲಿ ಕೆಟ್ಟ ಕೆಲಸ ಮಾಡಲು ಮನಸ್ಸು ಮಾಡದೇ ಒಳ್ಳೆಯ ಕೆಲಸ ಕಾರ್ಯ ಮಾಡಿದರೆ ಸಮಾಜವೇ ನಮ್ಮನ್ನು ಬೆಳೆಸುತ್ತದೆ ಎಂದು ಹೇಳಿದರು. ಉಪನ್ಯಾಸಕರಾದ ಟಿ ಎಸ್ ಒಂಟಗೊಡಿ ಮಾತನಾಡಿ ಏನ್ ಎಸ್ ಎಸ್ ಎಸ್ ಅಂದರೆ ನನಗಲ್ಲ ನಿನಗೆ ನಾವು ಬದುಕಿ ಇನ್ನೊಬ್ಬರನ್ನು ಬದುಕುವ ದಾರಿ. ದೇಶ ಸಮಾಜ ಸೇವೆ ಈಶ ಸೇವೆವೆಂದು ಸಮಾಜ ಸೇವೆ ಮಾಡಿದರೆ ಸಕಲ ಸೌಬಾಗ್ಯಗಳು ದೊರೆಯುತ್ತವೆ ಎಂದು ಹೇಳಿದರು. ರಾಷ್ಟೀಯ ಸೇವಾ ಯೋಜನೆಗೆ ಸಹಾಯ ಸಹಕಾರ ನೀಡಿದ ಮಹನೀಯರಿಗೆ ಹಾಗೂ ಶಿಬಿರಾರ್ಥಿಗಳಿಗೆ ಸನ್ಮಾನ ಮಾಡಿ ಸವಿ ನೆನಪಿನ ಕಾಣಿಕೆ ನೀಡಿದರು. ಈ ಸಮಯದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ನೀಲವ್ವ ಮಲ್ಲಪ್ಪ ಹೊಸಟ್ಟಿ. ಉಪಾಧ್ಯಕ್ಷೆ ಜಯಶ್ರೀ ಮಿರ್ಜಿ. ಮಾಜಿ ತಾ ಪ ಸದಸ್ಯೆ ಸವಿತಾ ಡಬ್ಬಣ್ಣವರ. ಪಿ ಕೆ ಪಿ ಯೆಸ್ ಅಧ್ಯಕ್ಷ ಸುರೇಶ ಕತ್ತಿ. ಕುಮಾರ ಲೋಕನ್ನವರ. ಹಣಮಂತ ತಾಳಿಕೋಟಿ. ಭೀಮಪ್ಪ ಹೊಸಟ್ಟಿ. ಮಾದೇವ ಪೂಜೇರಿ. ಗಂಗಪ್ಪಅತ್ತಮಟ್ಟಿ.ಕ ರಾ ಯ ಸಂ ಒಕ್ಕೂಟ ಜಿಲ್ಲಾಧ್ಯಕ್ಷ ಸಿದ್ದಣ್ಣ ದುರದುಂಡಿ. ಗೀತಾ ಹಿರೇಮಠ. ಪೂಜಾ ಮಾವರಕರ. ಶ್ರೀಶೈಲ ಹಡಪದ. ಯೆಸ್ ಬಿ ಗೋಟುರ. ಭಗವಂತ ರೋಡ್ಡನವರ. ಗುರುಪಾದ ಕೂಲಿಗೊಡ. ನಾಗಯ್ಯ ಹಿರೇಮಠ. ಮುತ್ತು ಕಲ್ಲೋಳಿ. ಗುರು ಕೂಲಿಗೊಡ. ಚಿನ್ನು ಸಿದ್ದಾಪೂರ. ಶ್ರೀಶೈಲ ಹುಲ್ಯಾಳ. ಕಾವ್ಯಾ ಕಲಾಲ. ಕಿರ್ತಿ ರಡ್ಡಿ ಒಂಟಗೊಡಿ. ಪೂಜಾ ಆಸಂಗಿ.ಶಿಬಿರಾ ದಿಕಾರಿ ಪಿ ಬಿ ಚೌಡಕಿ. ಸೇರಿದಂತೆ ಶಿಭೀರಾರ್ಥಿಗಳು ಶಾಲೆಯ ಶಿಕ್ಷಕವೃಂದದವರು ಹಾಗೂ ಗ್ರಾಮದ ಗುರು ಹಿರಿಯರಿದ್ದರು. ಕಾರ್ಯಕ್ರಮವನ್ನು ಶಂಕರ ಪಾಟೀಲ ಸ್ವಾಗತಿಸಿ. ಸಂಜೀವ ಮಂಟೂರ ನಿರೂಪಿಸಿ. ಎಮ ಎಸ್ ಒಡೆಯರ ವಂದಿಸಿದರು

## ಗಾಂಧಿಯವರ ಮರಿ ಮೊಮ್ಮಗ ತುಷಾರ ಗಾಂಧಿಯವರಿಗೆ ಕ್ವಿಟ್ ಇಂಡಿಯಾ ಚಳವಳಿಯ ಸ್ಮರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡದೇ ಬಂಧಿಸಿ,ಬಿಡುಗಡೆ



೧೯೪೨ ರಲ್ಲಿ ಮಹಾತ್ಮಾ ಗಾಂಧೀಜಿಯವರು ಮುಂಬಯಿನ ಗೋವಾಲಿಯಾ ಟ್ಯಾಂಕ್ ಮೈದಾನದಲ್ಲಿ ಬ್ರಿಟಿಷ ಸರಕಾರವನ್ನು ತೊಲಗಿಸಲು ಮಾಡು ಇಲ್ಲವೇ ಮಡಿ ಹೋರಾಟಕ್ಕೆ ಕರೆ ನೀಡಿದರು.ಅಂದಿನ ಸಭೆಗೆ ಬ್ರಿಟಿಷ್ ಸರ್ಕಾರ ಅನುಮತಿ ನೀಡಿತ್ತು. ಆದರೆ ಇಂದಿನ ಸ್ವತಂತ್ರ ಭಾರತದ ಇಂದಿನ ಸರಕಾರ ಅದೇ ಗಾಂಧಿಯವರ ಮರಿ ಮೊಮ್ಮಗ ತುಷಾರ ಗಾಂಧಿಯವರಿಗೆ ಕ್ವಿಟ್ ಇಂಡಿಯಾ ಚಳವಳಿಯ ಸ್ಮರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡದೇ ಬಂಧಿಸಿ,ಬಿಡುಗಡೆ ಮಾಡಿದೆ.ಗಿರಗಾಂವ್ ಚೌಪಾಟಿ ಯಿಂದ ಆಗಸ್ಟ್ ಕ್ರಾಂತಿ ಮೈದಾನಕ್ಕೆ ಶಾಂತಿ ನಡಿಗೆ ಮಾಡಲೂ ಪೊಲೀಸರು ಅವಕಾಶ ನೀಡಿಲ್ಲ.ಈ ಶಾಂತಿ ನಡಿಗೆಯಲ್ಲಿ ತುಷಾರ ಗಾಂಧಿ ಮಾತ್ರವಲ್ಲ, ಸಾಮಾಜಿಕ ಹೋರಾಟಗಾರ್ತಿ ಹಾಗೂ ಹೆಸರಾಂತ ನ್ಯಾಯವಾದಿ ಟಿಸ್ತಾ ಸೆಟಲ್ವಾಡ್ ಮತ್ತು ಸ್ವಾತಂತ್ರ್ಯ ಹೋರಾಟಗಾರ ಜಿ.ಜಿ.ಪಾರೀಖ್ ಮುಂತಾದವರು ಪಾಲ್ಗೊಳ್ಳಲಿದ್ದರು.ಇದು ಸ್ವತಂತ್ರ ಭಾರತದ ಅತಂತ್ರ ಸ್ಥಿತಿ.___ ___ಸನತ್ ಕುಮಾರ ಬೆಳಗಲಿ

## ನಿಮಗೆ ಮಾನಭಂಗ ಅತ್ಯಾಚಾರ ಏನೂ ಅಲ್ಲವೇ.. ಫ್ಲೈಯಿಂಗ್ ಕಿಸ್ಸೇ ದೊಡ್ಡದಾಯಿತೇ?

ಇರಾನಿಯವರೇ.. ಮಣಿಪುರದಲ್ಲಿ ನಡೆದಿರುವಂತಹ ಅತ್ಯಾಚಾರದ ಘಟನೆಯು ನಮ್ಮ ದೇಶದ ಕೆಟ್ಟ ಆಡಳಿತ ವ್ಯವಸ್ಥೆಗೆ ಹಿಡಿದ ಕನ್ನಡಿಯಾಗಿದೆ. ಏನಾಗಿದೆಯೋ ಅದನ್ನೇ ಕನ್ನಡಿ ತೋರಿಸುತ್ತದೆ. ಈ ಘಟನೆಯಿಂದಾಗಿ ಜಗತ್ತಿನಲ್ಲಿ ಭಾರತೀಯರು ತಲೆ ತಗ್ಗಿಸುವಂತೆ ಮಾಡಿದ್ದಂತೂ ನಿಜ. ನೀವು ಆ ಕನ್ನಡಿಯನ್ನು ಒಡೆಯಲು ಪ್ರಯತ್ನಿಸಿದರೆ ಅದರಲ್ಲಿ ಕಾಣುವ ಬಿಂಬಗಳು ಒಂದಕ್ಕೆ ಎರಡಾಗಿ ಎರಡಕ್ಕೆ ನಾಲ್ಕಾಗಿ ಏರುತ್ತಲೇ ಹೋಗುವುದು. ಕೇಂದ್ರ



ಮತ್ತು ರಾಜ್ಯಗಳಲ್ಲಿ ತಮ್ಮದೇ ಸರಕಾರ ಇದೆಯೆಂದಾಗ ಬರುವ ಭಂಡ ಧೈರ್ಯದಿಂದಲೇ ಇಂತಹ ಅಕ್ರತ್ಯ ನಡೆದಿರುವುದು ಧಿಟ.

ಮಣಿಪುರದಲ್ಲಿ ಮಹಿಳೆಯರನ್ನು ಬೆತ್ತಲೆ ಮೆರವಣಿಗೆ ಮಾಡಿದ ವಿಚಾರದಲ್ಲಿ ರಾಹುಲ್ ಗಾಂಧಿಯವರು ಸಂಸತ್ತಿನಲ್ಲಿ ಗುಡುಗಿದಾಗ ನೀವೆಲ್ಲರೂ ನಾಚಿ ತಲೆ ತಗ್ಗಿಸುತ್ತೀರಿ ಅಂದುಕೊಂಡಿದ್ದೆ. ಆದರೆ ಹಾಗಾಗಲಿಲ್ಲ.ಬಿಜೆಪಿ ಪಕ್ಷದ ಸಂಸದರೆಲ್ಲರೂ ಮುಖ ಸಿಂಡರಿಸಿಕೊಂಡಿದ್ದೀರಿ ಹೊರತು ನಿಮ್ಮಲ್ಲಿ ಎಳ್ಳಷ್ಟೂ ಪಾಪ ಪ್ರಜ್ಞೆ ಕಾಡಲಿಲ್ಲ. ಆ ಮುಖವನ್ನು ನೋಡಿದವರಿಗೆ ಅರ್ಥವಾದೀತು ನೀವೆಲ್ಲ ಎಂತ ಫ್ಯಾಸಿಸ್ಟ್ ಮನೋ ಪ್ರವ್ರತ್ತಿಯವರೆಂಬುದು.

ತಮ್ಮ ಅಧಿಕಾರದಡಿಯಲ್ಲಿ ನಡೆದಿರುವ ವ್ಯಾಪಕ ಹಿಂಸಾಚಾರ ಅತ್ಯಾಚಾರ ಮಾನಭಂಗದ ವಿಚಾರದಲ್ಲಿ ಒಂದು ಶಬ್ದವನ್ನು ಮಾತಾಡದೆ ಕೇವಲ ಒಂದು ಫ್ಲೈಯಿಂಗ್ ಕಿಸ್ ವಿಚಾರದಲ್ಲಿ ನೀವು ರಂಪ ಮಾಡಿದರೆ ಸಮಾಜ ನಿಮ್ಮನ್ನು ಒಪ್ಪುತ್ತಾ ಇರಾನಿಯವರೇ? ನೀವೂ ಒಬ್ಬ ಮಹಿಳೆಯಲ್ಲವೇ? ನಮ್ಮ ರಾಜ್ಯದ ಶೋಭಕ್ಕರವರ ವಿಚಾರದಲ್ಲಿ ಮಾತಾಡುವುದೇ ವ್ಯರ್ಥವೆಂದು ಕೊಂಡಿದ್ದೇನೆ. ಯಾಕಂದ್ರೆ ಅವರು ಹೆಣಬಿದ್ದಲ್ಲಿ ಮಾತ್ರ ಬಾಯಿಬಿಡುವವರೆಂದು ಜನ ತೀರ್ಮಾನ ಮಾಡಿದ್ದಾರೆ.

ಮಣಿಪುರದಲ್ಲಿ ನಡೆದಿರುವ ಘೋರ ಅಪರಾಧಕ್ಕೆ ನೀವೆಲ್ಲರೂ ಸಂಸತ್ತಿನೆದುರು ತಲೆಬಾಗಿ ನಿಂತು ಕ್ಷಮೆ ಕೇಳಬೇಕಿತ್ತು?. ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಲು ಒಡಲಾಳದಿಂದ ಒತ್ತಾಯಪಡಿಸಬೇಕಿತ್ತು. ಅದನ್ನು ನೀವ್ಯಾರೂ ಮಾಡಿಲ್ಲ.. ಯಾಕಂದ್ರೆ ನಿಮ್ಮ ಧೋರಣೆ ಇರುವುದೇ ಹೊಡಿಬಡಿಕಡಿ ಸಂಸ್ಕ್ರತಿಯಲ್ಲಿ. ಅದು ಬದಲಾಗದೆ ಸಮಾಜವು ನೆಮ್ಮದಿಯಿಂದಿರಲು ಸಾಧ್ಯವಿಲ್ಲ. ಮಾನವೀಯ ಹ್ರದಯವುಳ್ಳವರಾಗಿದ್ದರೆ ಒಮ್ಮೆ ನೀವು ಆ ಜಾಗದಲ್ಲಿ ನಿಂತು ಯೋಚಿಸಿರಿ...(ಬಾಬು ಪಿಲಾರ್.)

ನಮ್ಮ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರೆಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಗೆ ನಾಡಿನ ಒಂದು ಕೋಟಿಗೂ ಅಧಿಕ ಮಹಿಳೆಯರು ಯಶಸ್ವಿಯಾಗಿ ನೋಂದಣಿ ಮಾಡಿದ್ದಾರೆ. ಯಾರೊಬ್ಬರೂ ಯೋಜನೆಯ ಲಾಭದಿಂದ ವಂಚಿತರಾಗದೆ ಎಲ್ಲಾ ಅರ್ಹರನ್ನು ತಲುಪುವುದು ನಮ್ಮ ಉದ್ದೇಶ. ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ ಕ್ರಾಂತಿಕಾರಕ ಹೆಜ್ಜೆಯಾದ ನಮ್ಮ ಈ ಯೋಜನೆಯನ್ನು ಯಶಸ್ವಿಯಾಗಿಸಲು ತಮ್ಮೆಲ್ಲರ ಸಹಕಾರವಿರಲಿ.
– ಮುಖ್ಯಮಂತ್ರಿ




ಸಹಾಯವಾಣಿ



## ಪಶುವೈದ್ಯಕೀಯ ಮಹಾವಿದ್ಯಾಲಯದ ಇಂದು ಮಾನ್ಯ ಮುಖ್ಯಮಂತ್ರಿ ಸಾಹೇಬರಿಂದ ಉದ್ಘಾಟನೆ ಗೋಳ್ಳಲಿದೆ



ಅಥಣಿಯ ಹೆಮ್ಮೆಯ ಪಶುವೈದ್ಯಕೀಯ ಮಹಾವಿದ್ಯಾಲಯದ ಇಂದು ಮಾನ್ಯ ಮುಖ್ಯಮಂತ್ರಿ ಯವರಿಂದ ಉದ್ಘಾಟನೆ ಗೋಳ್ಳಲಿದೆ. ಇಷ್ಟು ವರ್ಷ ಕಾಲ ಕಟ್ಟಡಗಳ ಕಾಮಗಾರಿ ನೆಪದಲ್ಲಿ ವಿಳಂಬ ಮಾಡಲಾಯಿತು ಇನ್ನಾದರೂ ಆದಷ್ಟು ಬೇಗನೆ ಕಾರ್ಯಾರಂಭ ಮಾಡಿ ಗ್ರಾಮೀಣ ಪ್ರದೇಶಗಳ ಜಾನುವಾರು ಗಳ ಅಭಿವೃದ್ಧಿ ಗೆ ಸಹಕಾರಿ ಆಗಲಿ....ಮತ್ತುಅಲ್ಲಿ ಕಲಿಯುವ ವಿದ್ಯಾರ್ಥಿಗಳಿಗೆಮೂಲಭೂತ ಸೌಕರ್ಯ ಗಳು ಕಲ್ಪಿಸಬೇಕು.




## ಕೆ.ಕೆ.ಆರ್.ಡಿ.ಬಿ ಅಧ್ಯಕ್ಷರನ್ನಾಗಿ ಶಾಸಕ ರಾಕೇಶ್ ಸಿಂಗ್ ರವರನ್ನು ಸರ್ಕಾರ ನೇಮಕ ಮಾಡಿದೆ



ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರನ್ನಾಗಿ ಶಾಸಕ ಶ್ರೀ ರಾಕೇಶ್ ಸಿಂಗ್ ರವರನ್ನು ನೇಮಕ ಮಾಡಿ ಸರ್ಕಾರ ಆದೇಶಿಸಿದೆ.

## ತೋಟಗಾರಿಕೆ ಇಲಾಖೆ ತಾಳೆ ಬೆಳೆ ಪ್ರದೇಶ ವಿಸ್ತರಣೆ ಕಾರ್ಯಕ್ರಮ

ಧಾರವಾಡ ಆ.೧೦: ತೋಟಗಾರಿಕೆ ಪಿತಾಮಹ ಡಾ. ಎಂ. ಹೆಚ್. ಮರಿಗೌಡರ ಜನ್ಮ ದಿನಾಚರಣೆ



ಅಂಗವಾಗಿ ಇತ್ತೀಚಿಗೆ ತೋಟಗಾರಿಕೆ ಇಲಾಖೆ ಹಾಗೂ ೩ಎಫ್ ಆಯಿಲ್ ಪಾಮ್ ಪ್ರೈವೇಟ್ ಲಿಮಿಟೆಡ್ ಕಂಪನಿರವರ ಸಹಯೋಗದಲ್ಲಿ ಧಾರವಾಡ ತಾಲ್ಲೂಕಿನ ತಿಮ್ಮಾಪೂರ ಗ್ರಾಮದ ಮಹಾಂತಯ್ಯ ಹಿರೇಮಠ ರವರ ಹೊಲದಲ್ಲಿ ತಾಳೆ ಸಸಿ ನಾಟಿ ಮಾಡುವ ಮೂಲಕ ತಾಳೆ-ಬೆಳೆ ಪ್ರದೇಶ ವಿಸ್ತರಣೆ ಕಾರ್ಯಕ್ರಮದ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಹಾಗೂ ಉದ್ಘಾಟಕರಾಗಿ ಶಿವಲೀಲಾ ವಿನಯ ಕುಲಕರ್ಣಿ ರವರು ಆಗಮಿಸಿದ್ದರು. ಮರೇವಾಡ ಗ್ರಾಮ ಪಂಚಾಯತ್ ಅಧ್ಯಕ್ಷ ಈರಪ್ಪ ಪೂಜಾರ ಅಧ್ಯಕ್ಷತೆ ವಹಿಸಿದ್ದರು, ಕಾರ್ಯಕ್ರಮದಲ್ಲಿ ಮರೇವಾಡ, ತಿಮ್ಮಾಪೂರ ಹಾಗೂ ಅಮ್ಮಿನಬಾವಿ ಗ್ರಾಮಗಳ ರೈತರು ಮತ್ತು ಗ್ರಾಮ ಪಂಚಾಯತಿಯ ಸರ್ವ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಧಾರವಾಡ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕ ಕಾಶೀನಾಥ ಭದ್ರಣ್ಣವರ, ಅಮ್ಮಿನಬಾವಿ ರೈ. ಸಂ. ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿ ಮಹೇಶ ಪಟ್ಟಣಶೆಟ್ಟಿ ಹಾಗೂ ೩ಎಫ್ ಆಯಿಲ್ ಪಾಮ್ ಪ್ರೈವೇಟ್ ಲಿಮಿಟೆಡ್ ಕಂಪನಿಯ ಧಾರವಾಡ ಜಿಲ್ಲೆಯ ಏರಿಯಾ ಮ್ಯಾನೇಜರ್ ಮೃತ್ಯುಂಜಯ ಪಾಟೀಲ ಮತ್ತು ಕ್ಲಸ್ಟರ್ ಆಫೀಸರ್ ಸಿದ್ದಪ್ಪ ಕುಂದರಗಿ ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ ರೈತರಿಗೆ ಅವಶ್ಯವಿರುವ ಯೂರಿಯಾ ರಸಗೊಬ್ಬರ ಸರಬರಾಜು

ಹಾವೇರಿ.ಆ.೦೯: ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಬೆಳೆಗಳಿಗೆ ಮೇಲು ಗೊಬ್ಬರ ನೀಡುವ ಕಾರ್ಯ ಮುಂದುವರೆದಿದೆ. ಅವಶ್ಯಕವಿರುವ ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅವರು ತಿಳಿಸಿದ್ದಾರೆ.

ಜಿಲ್ಲೆಗೆ ಆಗಸ್ಟ್ ಮೊದಲನೇ ವಾರದ ಅಂತ್ಯದವರೆಗೆ ೩೫,೦೦೦ ಟನ್ ಯೂರಿಯಾ ರಸಗೊಬ್ಬರ ಸರಬರಾಜಾಗಬೇಕಾಗಿದ್ದು ಈವರೆಗೆ ೩೮,೧೧೩ ಟನ್ ಸರಬರಾಜಾಗಿದ್ದು, ಹಳೆಯ ದಾಸ್ತಾನು ಸೇರಿದಂತೆ ಒಟ್ಟಾರೆ ೫೬,೦೭೬ ಟನ್ ಲಭ್ಯವಿದ್ದು, ೪೫,೬೪೯ ಟನ್ ವಿತರಣೆಯಾಗಿದ್ದು, ೯,೯೪೯ ಟನ್ ಉಳಿಕೆ ದಾಸ್ತಾನು ವಿತರಣೆಗೆ ಲಭ್ಯವಿರುತ್ತದೆ.

ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ದರ ಪಟ್ಟಿಯನ್ನು ಮಾರಾಟ ಮಳಿಗೆಯಲ್ಲಿ ರೈತರಿಗೆ ಕಾಣುವಂತೆ ಪ್ರದರ್ಶಿಸಬೇಕು. ನಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುವುದು, ಬಿಲ್ ನೀಡದೇ ಇರುವುದು ಅಥವಾ ಇತರೆ ಉತ್ಪನ್ನಗಳನ್ನು ಲಿಂಕ್ ಮಾಡುವುದು, ರಸಗೊಬ್ಬರವನ್ನು ಅಕ್ರಮವಾಗಿ ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿ ಮಾಡುವುದು ಕಂಡುಬಂದಲ್ಲಿ ಅಂತಹ ಮಾರಾಟಗಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಮತ್ತು ಅಂತಹ ಮಾರಾಟಗಾರರ ಪರವಾನಿಗೆಯನ್ನು ರದ್ದು ಮಾಡಲಾಗುವ್ವದು ಎಂದು ತಿಳಿಸಿದ್ದಾರೆ.

ಬೆಳೆಗಳಲ್ಲಿ ಹೆಚ್ಚು ಯೂರಿಯಾ ಬಳಸಿದಲ್ಲಿ ಬೆಳೆಯು ಹೆಚ್ಚು ರಸವತ್ತಾಗಿ, ಮೆತ್ತಗಾಗಿ ಕೀಟ ಮತ್ತು ರೋಗದ ಬಾಧೆ ಹೆಚ್ಚಾಗುವ ಸಂಭವವಿರುತ್ತದೆ ಅದಲ್ಲದೆ ಬೆಳೆಯಲ್ಲಿ ಹೆಚ್ಚಿನ ಬೆಳವಣಿಗೆ ಕಂಡುಬರುತ್ತದೆ. ಆದ್ದರಿಂದ ಎಲ್ಲಾ ರೈತರು ಯೂರಿಯಾವನ್ನು ಅವಶ್ಯಕತೆಗೆ ತಕ್ಕಂತೆ ಬಳಸಲು ವಿನಂತಿಸಿದ್ದಾರೆ.

ಬೆಳೆ ರಕ್ಷಣೆ ಕ್ರಮಗಳು: ಗೋವಿನ ಜೋಳದಲ್ಲಿ ಎಲೆ ಹಳದಿಯಾಗಿ ಕಂಡುಬಂದಲ್ಲಿ ೧೯:೧೯:೧೯ ಅಥವಾ ೧೩:೦:೪೫ ನೀರಿನಲ್ಲಿ ಕರಗುವ ರಸಗೊಬ್ಬರವನ್ನು ಪ್ರತಿ ಲೀಟರ್ ನೀರಿಗೆ ೫ ಗ್ರಾಂ ನಂತೆ ಕರಗಿಸಿ ಸಿಂಪಡಿಸಬೇಕು. ಕಾಂಡಕೊರಕ ಮತ್ತು ಸೈನಿಕ ಹುಳುವಿನ ಹತೋಟಿಗಾಗಿ ೧.೫ ಮಿ.ಲೀ ಡೈಮಿತೋಯೆಟ್ ೩೦ ಇ.ಸಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು ಅಥವಾ ಇಮಾಮೆಕ್ಟಿನ ಬೆಂಝೋಯೆಟ್ ೦.೨ ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಸುಳಿಯಲ್ಲಿ ಹೋಗುವ ಹಾಗೆ ಸಿಂಪರಣೆ ಮಾಡಬೇಕು ಎಂದು ತಿಳಿಸಿದ್ದಾರೆ.

ಸತತ ಮಳೆಯಿಂದ ಶೇಂಗಾ ಬೆಳೆಯ ಎಲೆಗಳು ಹಳದಿ ಬಣ್ಣಕ್ಕೆ ತಿರುಗಿರನಿವುದರಿಂದ ಶೇ. ೦.೫ ರ ೧೯:೧೯:೧೯ ಅಥವಾ ೧೩:೦:೪೫ (೫ ಗ್ರಾಂ ಪ್ರತಿ ಲೀ. ನೀರಿಗೆ) ಮತ್ತು ಶೇ. ೦.೨೫ ರ ಸತುವಿನ ಸಲ್ಫೇಟ್ ದ್ರಾವಣವನ್ನು (೨.೫ ಗ್ರಾಂ ಪ್ರತಿ ಲೀ. ನೀರಿಗೆ) ಹಾಕಿ ಎರಡು ಸಲ ಅಂದರೆ ೧೫ ದಿವಸದ ಅಂತರದಲ್ಲಿ ಸಿಂಪಡಿಸಬೇಕು. ಪ್ರತಿ ಲೀಟರ್ ನೀರಿಗೆ ೫ ಗ್ರಾಂ ಸಿಂಪರಣೆ ಕೈಗೊಳ್ಳುವುದು. ಎಲೆ ಸುರುಳಿ ಪೂಚಿ ಕೀಟದ ನಿರ್ವಹಣೆಗಾಗಿ ೨ ಮಿ.ಲೀ ಪ್ರೋಪೆನೋಫಾಸ್ ೫೦ ಇ.ಸಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು .

ಹತ್ತಿ ಬೆಳೆಯಲ್ಲಿ ಪೋಷಕಾಂಶಗಳ ಕೊರತೆ ಪೂರೈಸಲು ೧೯:೧೯:೧೯ ಅಥವಾ ೧೩:೦:೪೫ ನೀರಿನಲ್ಲಿ ಕರಗುವ ರಸಗೊಬ್ಬರವನ್ನು ಪ್ರತಿ ಲೀಟರ್ ನೀರಿಗೆ ೫ ಗ್ರಾಂ ನಂತೆ ೩೦-೩೫ ದಿನದ ಬೆಳೆಗೆ, ೧೦ ಗ್ರಾಂ ನಂತೆ ೪೫-೬೦ ದಿನದ ಬೆಳೆಗೆ ಸಿಂಪರಣೆ ಕೈಗೊಳ್ಳಬೇಕು.

ಸೋಯಾಅವರೆ ಬೆಳೆಯಲ್ಲಿ ಪೋಷಕಾಂಶಗಳ ಕೊರತೆ ಪೂರೈಸಲು ಶೇ. ೧.೦ ರ ೧೩:೦:೪೫ ಅಥವಾ ಯೂರಿಯಾ ಸಿಂಪರಣೆ ಕೈಗೊಳ್ಳಬೇಕು. ಎಲೆ ತಿನ್ನುವ ಕೀಟಗಳ ನಿಯಂತ್ರಣಕ್ಕಾಗಿ ಪ್ರೋಪೆನೋಪೋಸ್ ೨ ಮಿ.ಲೀ ಅಥವಾ ಕ್ವಿನಾಲ್ಫೋಸ್ ೨ ಮಿ.ಲೀ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು ಎಂದು ಸಲಹೆ ನೀಡಿದ್ದಾರೆ.

## ಮಕ್ಕಳಲ್ಲಿ ಮೊಬೈಲ್ ಬಳಕೆ ಹೆಚ್ಚಳ ಹಿನ್ನೆಲೆ: ಮಿತ ಬಳಕೆ ಅಧ್ಯಯನಕ್ಕೆ ೧೦ ತಂಡ ರಚನೆ-ಕೆ.ನಾಗಣ್ಣಗೌಡ

ಕಲಬುರಗಿ,ಆ.: ಇತ್ತೀಚಿಗೆ ಮಕ್ಕಳಲ್ಲಿ ಮೊಬೈಲ್ ಬಳಕೆ ಹೆಚ್ಚಾಗಿದ್ದು ಇದರಿಂದ ಮಾನಸಿಕ ಸ್ಥಿರತೆ ಕಳೆದುಕೊಂಡಿದ್ದಾರೆ.



ಮೊಬೈಲ್ ಕೋರೊನಾ ಗಿಂತ ಡೇಂಜರ್ ಆಗಿ ಮಾರ್ಪಟ್ಟಿದೆ. ಮಕ್ಕಳಲ್ಲಿ ನೆನಪಿನ ಶಕ್ತಿ ಕಡಿಮೆಯಾಗಿದೆ. ಮಕ್ಕಳು ಮೊಬೈಲ್ ಬಳಕೆ ಮಿತವಾಗಿ ಬಳಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧ್ಯಯನ ನಡೆಸಲು ಆಯೋಗವು ೧೦ ತಂಡ ರಚಿಸಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ. ನಾಗಣ್ಣಗೌಡ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆರ್.ಟಿ.ಇ, ಪೊ?ಕ್ಸೋ, ಬಾಲ ನ್ಯಾಯ ಕಾಯ್ದೆ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಸಭೆ ನಂತರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈ ತಂಡದಲ್ಲಿ ವೈದ್ಯರು, ಮಕ್ಕಳ, ಪಾಲಕರು, ಸೈಕ್ಯಾಟ್ರಿಸ್ಟ್ ಇರಲಿದ್ದು ಮೂರು ತಿಂಗಳ ಕಾಲ ರಾಜ್ಯದಾದ್ಯಂತ ಅಧ್ಯಯನ ಮಾಡಿ ವರದಿ ಸಲ್ಲಿಸಲಿದ್ದು, ವರದಿ ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ಇತ್ತೀಚೆಗೆ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚುತ್ತಿವೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪಾಠದ ಜೊತೆಗೆ ಆಟ, ಸಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸುವಿಕೆ ಬಹುಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸುವಂತೆ ಇಂದು ನಡೆದ ಅಧಿಕಾರಿಗಳ ಸಭೆಯಲ್ಲಿ ನಿರ್ದೇಶನ ನೀಡಲಾಗಿದೆ ಎಂದರು.

ಇನ್ನು ಕಲಬುರಗಿ ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಆತ್ಮ ರಕ್ಷಣೆ ಮತ್ತು ಸುರಕ್ಷತೆ ನಿಟ್ಟಿನಲ್ಲಿ ಶಾಲಾ ಕಾಲೇಜು, ವಸತಿ ನಿಲಯದಲ್ಲಿನ ಮಕ್ಕಳಿಗೆ ತರಬೇತಿ ನೀಡಲು ೩೦೦ ತರಬೇತಿದಾರರನ್ನು ಆಯ್ಕೆ ಮಾಡಿಕೊಂಡಿರುವುದು ಉತ್ತಮ ನಡೆಯಾಗಿದೆ ಎಂದ ಅವರು, ಆಟೋ ಶಾಲಾ ಬಸ್ ಗಳಲ್ಲಿ ಮಿತಿಗಿಂತ ಹೆಚ್ಚಿನ ಮಕ್ಕಳನ್ನು ಕರೆದೊಯ್ಯದಂತೆ ಆರ್.ಟಿ.ಓ ಮತ್ತು ಸಂಚಾರಿ ಪೊಲೀಸರು ನಿಯಂತ್ರಣ ಹಾಕಬೇಕು. ಇನ್ನು ೧೮ ವರ್ಷದೊಳಗಿನ ಮಕ್ಕಳು ಬೈಕ್ ನಡೆಸದಂತೆಯೂ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.ಸಮರ್ಪಕ ಬಸ್ ಇಲ್ಲದೆ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಮಕ್ಕಳು ಶಾಲೆಗೆ ಹೋಗಲು ತೊಂದರೆ ಅನುಭವಿಸುತ್ತಿದ್ದಾರೆ ಎಂಬ ಪತ್ರಕರ್ತ ಪ್ರಶ್ನೆಗೆ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ಉತ್ತರಿಸಿ, ಇಂತ ಯಾವುದೇ ಪ್ರಕರಣ ಕಂಡುಬಂದಿದ್ದಲ್ಲಿ ಆಯೋಗವು ಸ್ವಯಂ ಪ್ರಕರಣ ದಾಖಲಿಸು ಕೊಂಡು ಕ್ರಮ ಕೈಗೊಳ್ಳಲಿದೆ. ಮುಂದುವರೆದು ಇದಕ್ಕೆ ಅವಕಾಶ ನೀಡದಂತೆ ಕೆ.ಕೆ.ಆರ್.ಟಿ.ಸಿ. ಎಂ.ಡಿ. ಅವರು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ತಿಳಿಸಿದರು. ಮಕ್ಕಳಿಗೆ ಪ್ರತ್ಯೇಕ ಬಸ್, ಶಿಕ್ಷಣ ಸಚಿವರೊಂದಿಗೆ ಚರ್ಚೆ:- ಶಕ್ತಿ ಯೋಜನೆಯಿಂದ ಬಸ್ ಗಳಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದ್ದು, ಮಕ್ಕಳ ಪ್ರಯಾಣ ಸಂಕಷ್ಟವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಶಾಲಾ ಮಕ್ಕಳಿಗೆ ಪ್ರತ್ಯೇಕ ಸಾರಿಗೆ ವ್ಯವಸ್ಥೆ ಕಲ್ಪಿಸಬಹುದೇ ಎಂದ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಅವರು, ಈ ಕುರಿತು ಶಿಕ್ಷಣ ಸಚಿವರು ಮತ್ತು ಮುಖ್ಯ ಕಾರ್ಯದರ್ಶಿಯೊಂದಿಗೆ ಚರ್ಚಿಸುವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಡಿ.ಸಿ.ಫೌಜಿಯಾ ತರನ್ನುಮ್ ಇದ್ದರು.

## "ಜಿ.ಬಿ.ವಿನಯ್ ಕುಮಾರ್" ದಾವಣಗೆರೆ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸುವುದು ಬಹುತೇಕ ಖಚಿತ ??

ಬೆಂಗಳೂರಿನಲ್ಲಿ ಇನ್ ಸೈಟ್ ಐ.ಎ.ಎಸ್,ಕೋಚಿಂಗ್ ಸೆಂಟರ್ ನ ಸಂಸ್ಥಾಪಕ ನಿರ್ದೇಶಕರಾದಂಥ

ಶ್ರೀ ಜಿ.ಬಿ.ವಿನಯ್ ಕುಮಾರ್ ರವರು ಮೂಲತಃ ದಾವಣಗೆರೆಯವರು.ಇವರು ಇನ್ ಸೈಟ್ ಐಎಎಸ್ ಎಂಬ ಉನ್ನತ ಶಿಕಣ ವಾದ ಐಎಎಸ್ ತರಬೇತಿ ಸಂಸ್ಥೆಯನ್ನು ತೆರೆದು ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ನೂರಾರು ವಿದ್ಯಾರ್ಥಿಗಳು ಇಂದು ಈ ಸೆಂಟರ್ ನಲ್ಲಿ ತರಬೇತಿಪಡೆದು ಐಎಎಸ್ ಅಧಿಕಾರಿಗಳಾಗಿ ದೇಶ

ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಈ ಕೋಚಿಂಗ್ ಸೆಂಟರಲ್ಲಿ ತರಬೇತಿ ಪಡೆದು ಐಎಎಸ್ ಪರೀಕ್ಷೆಯಲ್ಲಿ ರಾಜ್ಯಕ್ಕೇ ಪ್ರಥಮ ದರ್ಜೆಯಲ್ಲಿ ಉತ್ತೀರ್ಣನಾದ ದಾವಣಗೆರೆಯ ವಿದ್ಯಾರ್ಥಿಯೊಬ್ಬರು ಇವತ್ತು ಹೊರದೇಶದಲ್ಲಿ

ನಮ್ಮದೇಶದ ರಾಯಭಾರಿಕಚೇರಿಯಲ್ಲಿ ಕಾರ್ಯ ನಿರ್ವಹಿಸುತಿದ್ದಾರೆ. ಹೀಗೆ ಹಲವಾರು ವಿದ್ಯಾರ್ಥಿಗಳು ಇವರ ಸೆಂಟರ್ ನಲ್ಲಿ ತರಬೇತಿಪಡೆದವರು ಜಿಲ್ಲಾಧಿಕಾರಿಗಳರಥ ಉನ್ನತ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಈ ಸಂಸ್ಥೆಗೆ ಮತ್ತು ರಾಜ್ಯಕ್ಕೆ ಹೆಮ್ಮೆಯ ವಿಷಯ. ಇನ್ ಸೈಟ್ ಐಎಎಸ್ ಸಂಸ್ಥೆಯನ್ನು ತೆರೆದು ನೂರಾರು ಯುವಜನರ ಬಾಳಲ್ಲಿ ಬೆಳಕು ಚಲ್ಲಿದ ಶ್ರೀ ಬಿಜಿ.ವಿನಯ್ ಕುಮಾರ್ ಇವತ್ತು ಮತ್ತೊಂದು ಹೆಜ್ಜೆ ಮುಂದಿಟ್ಟು ವಿದ್ಯಾರ್ಥಿ ಯುವ ಜನರ

ಆಶಾಕಿರಣವಾಗಿ ಬಡವರ ದೀನದಲಿತರ

ಅಸಹಾಯಕರುಗಳಿಗೆ ಧ್ವನಿಯಾಗುವ ನಿಟ್ಟಿನಲ್ಲಿ ತನ್ನನ್ನು ಸಾಮಾಜಿಕ ಸೇವೆಯಲ್ಲಿತೊಡಗಿಸಿ ಕೊಳ್ಳಲು ರಾಜಕೀಯ ಪ್ರವೇಶಿಸುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ.

ಇವರು ದಾವಣಗೆರೆ ಲೋಕಸಭೆಗೆ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಾಕಾಂಕ್ಷಿಯಾಗಿ ಬಹು ವೇಗದಿಂದ

ಪಕ್ಷಸಂಘಟಿಸುತ್ತಿರುವುದು ಕಾಂಗ್ರೇಸ್ ಪಕ್ಷದ ವಲಯದಲ್ಲಿ ಹರ್ಷಉಂಟುಮಾಡಿದೆ. ಶ್ರೀ ಜಿಬಿ.ವಿನಯ್ ಕುಮಾರ್ ಒಳ್ಳೆಯ ವಿದ್ಯಾವಂತ ಹೆಸರಿಗೆ ತಕ್ಕಹಾಗೆ ವಿನಯ ಯಾಯಾಗಲೂ ಹಸನ್ಮುಖಿಯಾಗಿ ಸದಾ ಲವಲವಿಕೆಯ ಚೇತನ. ಬಾಲ್ಯದ ದಿನಗಳಲ್ಲಿ ಬಡತನದ ಅನುಭವವನ್ನು ಕಣ್ಣಾರೆ ಕಂಡು ಬಡಜನರ ಏಳ್ಗೆಗಾಗಿ ಬರಿ ಕಂಬನಿ ಮಿಡಿದರೆ ಸಾಲದು ಅವರ ಬಾಳಲ್ಲಿ ಬೆಳಕು ಮೂಡಿಸಿ ಬಡತನ ಬಡತನ ಬವಣೆಯಿಂದ ಹೊರ ಬರಲು ಅವರ ಮಕ್ಕಳ ವಿದ್ಯಾಸಭ್ಯಾಸ ಸಹಕಾರಿಯಾಗಬಲ್ಲದು ಬಡವರ ಮಕ್ಕಳ ಪ್ರತಿಭಾವಂತರನ್ನು ಐಎಎಸ್ ತರಬೇತಿ ನೀಡಿ ಅವರನ್ನು ಶೈಕ್ಷಣಿಕವಾಗಿ

ಆರ್ಥಿಕವಾಗಿ ಮೇಲೆಳಲು ಸಾಮಾಜಿಕವಾಗಿ



ಶೋಷಣೆಯಿಂದ ಹೊರತರಲು ವಿನಯ ಪ್ರಯತ್ನಿಸುವತ್ತ

ಧಾಪುಗಾಲಿಡುತ್ತಿರುವುದು ಬಡವರ ಬಾಳಲ್ಲಿ ಹೊಸ ಚಿಗುರು ಮೂಡಿಸಿದೆ. ವಿನಯ್ ಕುಮಾರ್ ದಾವಣಗೆರೆ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವುದು ಬಹುತೇಕ ಖಚಿತ ವೆಂಬಂತಾಗಿದೆ ಹಾಗಾಗಿ ವಿನಯ್ ಕುಮಾರ್ ಈ ಗಾಗಲೇ ದಾವಣಗೆರೆ ಲೋಕಸಭಾ ವ್ಯಾಪ್ತಿಯ ಎಂಟೂ ವಿಧಾನ ಸಭಾ ಕ್ಷೇತ್ರಗಳಲ್ಲಿ ಪಕ್ಷದ ಸಂಘಟನೆಯನ್ನು ಚುರುಕು ಗೊಳಿಸಿದ್ದು ಈಗಾಗಲೇ ದಾವಣಗೆರೆ ಜಿಲ್ಲೆಯ ರಾಜಕೀಯವಲಯದಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಹೊಸ ಶಕ್ತಿ ತುಂಬುತ್ತಿರುವುದು ಪಕ್ಷದ ಮುಖಂಡರಲ್ಲಿ ಸಂತಸ ತರಿಸಿದೆ. ಶ್ರೀ ವಿನಯ ಕುಮಾರ್ ಜಿಲ್ಲೆಯ ಹಿರಿಯ ಮತ್ತು ಕಿರಿಯ ರಾಜಕಾರಣಿಗಳ ಸಲಹೆ ಪಡೆದು ಅವರ ಸಹಕಾರದಿಂದ ಜಗಳೂರು-ಚನ್ನಗಿರಿ-ಹರಿಹರ-ಹರಪ್ಪನಹಳ್ಳಿ-ಮಾಯಕೊಂಡ-ಮತ್ತು ದಾವಣಗೆರೆ ಉತ್ತರ ಮತ್ತು ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ಈ ಗಾಗಲೇ ಎರಡೆರಡು ಸುತ್ತು ಹೋಗಿ ಸ್ಥಳೀಯ ಮುಖಂಡರ ಹಾಗೂ ಕಾರ್ಯಕರ್ತರ ಮತ್ತು ಅಭಿಮಾನಿಗಳ ಸಲಹೆ ಸೂಚನೆಗಳನ್ನು ಪಡೆದು ಅವರೊಂದಿಗೆ ಸಭೆಸಮಾರಂಭಗಳನ್ನು ಮಾಡಿ ಪಕ್ಷ ಸಂಘಟನೆಗೆ ಭದ್ರ ಬುನಾದಿ ಹಾಕಿದ್ದಾರೆ. ಹಳೇ ಬೇರು ಹೊಸ ಚಿಗುರು ಸೇರಿದರೆ ಮರ ಸೊಬಗು ಎಂಬಂತೆ ಹಿರಿಯರಾಜಕಾರಣಿಗಳು ಯುವ ಉತ್ಸಾಹಿ ಯುವಕರ ಪ್ರಜ್ಞಾವಂತರ ರಾಜಕೀಯ ಪ್ರವೇಶ ಪ್ರಸ್ತುತ ಅಗತ್ಯವಾಗಿರುವ ಈ ಸಂದರ್ಭದಲ್ಲಿ ವಿನಯ್ ರವರ ರಾಜಕೀಯ ಪ್ರವೇಶ ಮತ್ತು ಅವರ ಪಕ್ಷಸಂಘಟನೆಯ ಚಾತುರ್ಯತೆ ಜಿಲ್ಲೆಯ

ರಾಜಕೀಯ ವಲಯದಲ್ಲಿ

ಆಶಾಕಿರಣವಾಗಿರುವದಂತೂ ದಿಟವಾಗಿ ಗೋಚರಿಸುತ್ತಿದೆ.

## ಭದ್ರಾ ಎಡ-ಬಲ ನಾಲೆಗಳಿಗೆ ನೀರು ಬಿಡುಗಡೆ

ದಾವಣಗೆರೆ; ಆ. ೧೦: ಭದ್ರಾ ಜಲಾಶಯದ ಜಲಾನಯನ ಪ್ರದೇಶದಲ್ಲಿನ ಮುಂಗಾರು ಬೆಳೆಗಳಿಗೆ ಆಗಸ್ಟ್ ೧೦ ರಿಂದ ಎಡದಂಡೆ ಮತ್ತು ಬಲದಂಡೆ ನಾಲೆ, ಆನವೇರಿ ಶಾಖಾ ನಾಲೆ, ದಾವಣಗೆರೆ ಶಾಖಾ ನಾಲೆ, ಮಲೆಬೆನ್ನೂರು ಶಾಖಾನಾಲೆ, ಹರಿಹರ ಶಾಖಾನಾಲೆ ಮತ್ತು ಗೋದಿ ನಾಲೆಗಳಿಗೆ ನೀರು ಹರಿಸಲಾಗುತ್ತದೆ.

ಆದ್ದರಿಂದ ಕಾಲುವೆ ಪಾತ್ರಗಳಲ್ಲಿ ಸಾರ್ವಜನಿಕರು ಮತ್ತು ರೈತರು ತಿರುಗಾಡುವುದು, ದನಕರುಗಳನ್ನು ತೊಳೆಯುವುದು ಮತ್ತು ದೈನಂದಿನ ಚಟುವಟಿಕೆ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಬಿ.ಆರ್, ಪ್ರಾಜೆಕ್ಟ್ ನ ಕ.ನೀ.ನಿ.ನಿ, ಭದ್ರಾ ಯೋಜನಾ ವೃತ್ತ, ಅಧೀಕ್ಷಕ ಅಭಿಯಂತರರು ಹಾಗೂ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಕ್ಕೆ ಕಟ್ಟಡ ಬೇಕಾಗಿದೆ

ದಾವಣಗೆರೆ; ಆ. ೧೦ : ದಾವಣಗೆರೆ ನಗರ ವ್ಯಾಪ್ತಿಯಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಮಂಜೂರಾಗಿದ್ದು, ನಿಲಯ ನಡೆಸಲು ೯೦೦ ಚದರ ಮೀಟರ್ ವಿಸ್ತೀರ್ಣವುಳ್ಳ ಮೂಲಭೂತ ಸೌಲಭ್ಯವಿರುವ ಸುಸಜ್ಜಿತವಾದ ಕಟ್ಟಡದ ಮಾಲೀಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಕಟ್ಟಡದ ಮಾಲೀಕರು ಆಗಸ್ಟ್ ೨೫ ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲ್ಲೂಕು ಕಲ್ಯಾಣಾಧಿಕಾರಿ ಜಿ. ಮಲ್ಲಿಕಾರ್ಜುನಪ್ಪ(ಹೊಸ ರಿಂಗ್ ರಸ್ತೆ), ಶ್ರೀಮತಿ ರತ್ನಮ್ಮ ತೆಲಗಿ ಸಿದ್ದೇಶ್ ರೆಸಿಡೆನ್ಸಿಯಲ್ ಲೇಔಟ್, ಶ್ರೀ ದೇವರಾಜ ಅರಸು ಭವನ ಇವರನ್ನು ಸಂಪರ್ಕಿಸಲು ತಾಲ್ಲೂಕು ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ದಾವಣಗೆರೆ; ಆ. ೧೦: ಹರಿಹರದ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಮತ್ತು ಡಿಪ್ಲೋಮಾ ಇನ್ ಆಟೋಮೇಷನ್ ಅಂಡ್ ರೋಬೋಟಿಕ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿ ಹಾಗೂ ಪ್ರವೇಶಕ್ಕಾಗಿ ಹರಿಹರದ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದ ಪ್ರಾಶುಪಾಲರನ್ನು ಸಂಪರ್ಕಿಸಬಹುದು.ಹೆಚ್ಚಿನ ಮಾಹಿತಿಗಾಗಿ ದೂ.೮೭೧೯೧೯೫೪೭೭ ಸಂಪರ್ಕಿಸಬಹುದೆಂದು ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇವರಾಜ ಅರಸುರವರ ೧೦೮ ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿ – ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ

ದಾವಣಗೆರೆ .ಆ,೧೦: ಹಿಂದುಳಿದ ವರ್ಗಗಳ ನೇತಾರ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ರವರ ೧೦೮ ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ವೆಂಕಟೇಶ್.ಎಂ.ವಿ ಎಂದು ಹೇಳಿದರು. ಗುರುವಾರ ಜಿಲ್ಲಾಡಳಿತ ಭವನದಲ್ಲಿ ನಡೆದ



ದೇವರಾಜ ಅರಸು ಜಯಂತಿ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ ಆಗಸ್ಟ್ ೨೦ ರಂದು ಬೆಳಿಗ್ಗೆ ೧೦ ಗಂಟೆಗೆ ದೇವರಾಜ ಅರಸು ಬಡಾವಣೆಯ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿರುವ ಶ್ರೀಯುತರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ವಿವಿಧ ಕಲಾತಂಡಗಳ ಮೆರವಣಿಗೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಅರಸುರವರು ನಾಡಿಗೆ ನೀಡಿರುವ ಕೊಡುಗೆಗಳ ಕುರಿತು ಉಪನ್ಯಾಸ ಇರಲಿದೆ ಎಂದರು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಮಾತನಾಡಿ ಹಿಂದುಳಿದ ವರ್ಗಗಳ ಮೆಟ್ರಿಕ್- ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು, ಆಶ್ರಮ ಶಾಲೆಗಳು, ಖಾಸಗಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಡಿ ದೇವರಾಜ ಅರಸು ರವರ ಜನ್ಮದಿನಾಚರಣೆಯನ್ನು ಕಡ್ಡಾಯವಾಗಿ ಆಚರಿಸಬೇಕೆಂದರು. ಮಾಜಿ ಮುಖ್ಯಮಂತ್ರಿ ಡಿ ದೇವರಾಜು ಅರಸು ರವರ ಪ್ರತಿಮೆ ಇರುವ ಸ್ಥಳದಲ್ಲಿ ಸುಣ್ಣ ಬಣ್ಣ ಸ್ವಚ್ಚತೆಯ ಬಗ್ಗೆ ಮಹಾನಗರಪಾಲಿಕೆ ಕ್ರಮಕೈಗೊಳ್ಳಬೇಕೆಂದು ತಿಳಿಸಿದರು. ಪ್ರತಿಮೆ ಇರುವ ಸ್ಥಳದಲ್ಲಿ ಅಲಂಕಾರಿಕ ಬಣ್ಣ ಬಣ್ಣ ಹೂವಿನ ಕುಂಡಲಗಳನ್ನು ಇಡುವಂತೆ ತೋಟಗಾರಿಕೆ ಇಲಾಖೆಯವರಿಗೆ ಸೂಚಿಸಿದರು.

೨೦೨೨-೨೩ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಸ್ನಾತಕೋತ್ತರ ಪದವಿಯಲ್ಲಿ ಜಿಲ್ಲಾ ಮಟ್ಟದಲ್ಲಿ ಅತ್ಯಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದು. ನಿಲಯದಲ್ಲಿನ ವಿದ್ಯಾರ್ಥಿಗಳಿಗೆ ಪ್ರಬಂಧ, ಭಾಷಣ, ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಿ ಬಹುಮಾನಗಳನ್ನು ನೀಡಲಾಗುವುದು ಎಂದರು.

ಸಭೆಯಲ್ಲಿ ದೂಡಾ ಆಯುಕ್ತರಾದ ಬಸವನಗೌಡ ಕೊಟೂರು, ಪಾಲಿಕೆ ರೇಣುಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗಾಯಿತ್ರಿ ಹಾಗೂ ವಿವಿಧ ಸಮುದಾಯಗಳ , ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿದ್ದರು.

## ಇಂದು ಪಾಲಿಕೆಯ ನಾಲ್ಕು ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ



ದಾವಣಗೆರೆ; ಆಗಸ್ಟ್ ೧೦ : ಆಗಸ್ಟ್ ೧೧ ರಂದು ಮ. ೩ ಗಂಟೆಗೆ ಮಹಾನಗರ ಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ನಾಲ್ಕು ಸ್ಥಾಯಿ ಸಮಿತಿ ಸದಸ್ಯರುಗಳನ್ನು ಆಯ್ಕೆ ಮಾಡಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್ ಇವರ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದೆ.

## ನೂತನ ಜಿ.ಪಂ ಸಿಇಓರಿಂದ ಕಛೇರಿ ಆವರಣದಲ್ಲಿ ಸಸಿ ನೆಟ್ಟು ಕರ್ತವ್ಯಕ್ಕೆ ಹಾಜರು

ರಾಯಚೂರು,ಆ.೧೦:- ಆ.೦೯(ಬುಧವಾರ)ದಂದು ರಾಯಚೂರು ಜಿಲ್ಲಾ ಪಂಚಾಯತಿಗೆ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ರಾಹುಲ್ ತುಕಾರಾಂ ಪಾಂಡ್ವೆ ರವರು ಕರ್ತವ್ಯಕ್ಕೆ ಹಾಜರಾಗಿ ದಿನದಂದು ಸರಕಾರಿ ನೌಕರರಾಗಿ ಆಯ್ಕೆಯಾದ ನೌಕರರೊಂದಿಗೆ ಜಿಲ್ಲಾ ಪಂಚಾಯತ್ ಕಛೇರಿ ಆವರಣದಲ್ಲಿ ಸಸಿಯನ್ನು ನೆಟ್ಟರು.

ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಮತ್ತು ಕರವಸೂಲಿಗಾರ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-೨ ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ಪದನ್ನೂತಿ ಹೊಂದಿದ ಪ್ರಯುಕ್ತ ಆಯ್ಕೆಯಾದ ೫೦ ರಲ್ಲಿ ೪೭ ಜನ ನೌಕರರಿಗೆ ಉಪಕಾರ್ಯದರ್ಶಿಯವರು ಆದೇಶ ನೀಡಲಾಯಿತು



ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು ಶಶಿಕಾಂತ ಶಿವಪುರೆ, ಯೋಜನೆ ನಿರ್ದೇಶಕರು ಪ್ರಕಾಶ ವಿ. ಮತ್ತು ಗ್ರಾ.ಪಂಯ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಸಂಘದ ರಾಜ್ಯಧ್ಯಕ್ಷರಾದ ಭೀಮರೆಡ್ಡಿ ಪಾಟೀಲ್, ಜಿಲ್ಲಾ ಅಧ್ಯಕ್ಷರಾದ ಅಶೋಕ ಗ್ರಾ.ಪಂಯ ಕ್ಲರ್ಕ್ ಕಂ ಡಾಟಾ ಎಂಟ್ರಿ
ಆಪರೇಟರ್ ಹಾಗೂ ಕರವಸೂಲಿಗಾರರು ಇದ್ದರು.

## ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

ರಾಯಚೂರು,ಆ.೧೦:- ೨೦೨೩-೨೪ನೇ ಸಾಲಿಗೆ ಮಕ್ಕಳಿಗಾಗಿ ಭಾರತದ ಅತ್ಯುನ್ನತ ನಾಗರಿಕ ಗೌರವ ಪ್ರಶಸ್ತಿಯಾದ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ್ ಪ್ರಶಸ್ತಿ(ಪಿಎಂಆರ್‌ಬಿಪಿ)ಗೆ https://awards.gov.in ವೆಬ್ ಸೈಟ್ ಮೂಲಕ ಆನ್ ಲೈನ್ ಅರ್ಜಿಗಳನ್ನು ಆಹ್ವಾನಲಾಗಿದ್ದು, ಪ್ರಶಸ್ತಿಯ ಬಹುಮಾನವಾಗಿ ಒಂದು ಪದಕ, ಪ್ರಶಸ್ತಿ ಪ್ರಮಾಣ ಪತ್ರ ಮತ್ತು ಒಂದು ಲಕ್ಷ ನಗದು ಬಹುಮಾನವನ್ನು ಗೊತ್ತುಪಡಿಸಲಾಗಿದೆ. ಪ್ರಶಸ್ತಿಯಲ್ಲಿ ಎರಡುವರ್ಗೀಕರಣ ಮಾಡಲಾಗಿದೆ. ಎರಡು ವಿಧಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಮಕ್ಕಳ ಶೌರ್ಯ ಪ್ರಶಸ್ತಿ: ತನ್ನ ಜೀವಕ್ಕೆ ಅಘಾಯದ ಸಂದರ್ಭದಲ್ಲಿ ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿದ ಅಥವಾ ನೈಸರ್ಗಿಕ ವಿಕೋಪ/ ಸಮಾಜದ ಪ್ರತಿಕೂಲ ಸಮಯದ ವಿರುದ್ಧ ಅತ್ಯುತ್ತಮ ಧೈರ್ಯ-ಸಹಾಸ ಮೆರೆದ ೧೮ ವರ್ಷ ಒಳಗಿನ ಮಕ್ಕಳು ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಅಸಾಧಾರಣ ಪ್ರತಿಭೆ ಪ್ರಶಸ್ತಿ: ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ, ನಾವೀನ್ಯತೆ ಕ್ಷೇತ್ರಗಳಲ್ಲಿ ಅಸಾಧಾರಣೆ ಸಾಧನೆ ಮಾಡಿದ ೧೮ ವರ್ಷ ಒಳಗಿನ ಮಕ್ಕಳು ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

**ಅರ್ಜಿ ಸಲ್ಲಿಸಲು ಮಾನದಂಡಗಳು:** ಭಾರತೀಯ ಪ್ರಜೆಯಾಗಿರಬೇಕು, ಭಾರತದಲ್ಲಿ ವಾಸವಾಗಿರಬೇಕು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ೧೮ ವರ್ಷದೊಳಗಿನವರಾಗಿರಬೇಕು, ಅರ್ಜಿದಾರರು ಈ ಹಿಂದೆ ಪ್ರಶಸ್ತಿಯನ್ನು ಪಡೆದಿರಬಾರದು, ಅರ್ಜಿದಾರರು ಒಂದಕ್ಕಿಂತ ಹೆಚ್ಚಿನ ಕ್ಷೇತ್ರಗಳಲ್ಲಿ ಅರ್ಜಿ ಸಲ್ಲಿಸಿದ್ದಲ್ಲಿ, ಯಾವುದಾದರು ಒಂದು ಕ್ಷೇತ್ರದ ಅರ್ಜಿಯನ್ನು ಪರಿಗಣಿಸಲಾಗುವುದು, ನಿಗದಿಪಡಿಸಲಾದ ಸಕ್ಷಮ ಪ್ರಾಧಿಕಾರದಿಂದ ನಾಮನಿರ್ದೇಶನ ಮತ್ತು ಶಿಫಾರಸ್ಸು ಪಡೆದು ಅರ್ಜಿದಾರರು ಅರ್ಜಿಯನ್ನು ಸಲ್ಲಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.ದೇವರಾಜ ಅರಸ ಅವರ ಜಯಂತಿ ಆಚರಣೆಗೆ ಸಕಲ ಸಿದ್ದತೆ ಕೈಗೊಳ್ಳಿ: ಎಡಿಸಿ ದುರುಗೇಶ ಸಿ



ರಾಯಚೂರು,ಆ.೧೦:- ಕನಾಟಕದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ೧೦೮ನೇ ಜನ್ಮ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಅಧಿಕಾರಿಗಳು ಅಕಲ ಸಿದ್ದತೆಗಳನ್ನು ಮಾಡಿಕೊಳ್ಳಬೇಕು ಮತ್ತು ಕಾರ್ಯಕ್ರಮಕ್ಕೆಪ್ರತಿಯೊಬ್ಬರ ಸಹಕಾರ ಅಗತ್ಯ ಎಂದು ಅಪರ ಜಿಲ್ಲಾಧಿಕಾರಿಡಾ.ಕೆ.ಆರ್ ದುರುಗೇಶ ಹೇಳಿದರು. ಅವರು ಆ.೧೦ರ(ಗುರುವಾರ) ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಡಿ.ದೇವರಾಜ ಅರಸು ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ೧೦೮ನೇ ಜನ್ಮ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು, ಹಾಗೂ ಪ್ರಬಂಧ, ಭಾಷಣ ಸ್ಪರ್ಧೆ ಏರ್ಪಡಿಸಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಲಾಗುವುದು ಎಂದರು.

ಆ. ೨೦ರಂದು ಬೆಳಿಗ್ಗೆ ೯ಕ್ಕೆ ನಗರದ ಅಂಬೇಡ್ಕರ್ ವೃತ್ತದಿಂದ ಡಿ.ದೇವರಾಜ ಅರಸುರವರ ಭಾವಚಿತ್ರ ಮೆರವಣಿಗೆ ನಡೆಸಲಾಗುತ್ತದೆ, ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದರು. ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ಸಮಾಜದ ಜಾತಿ ಜನಾಂಗದವರು ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತೆ ಮಹೆಬೂಬಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ಮಂಗಳಾ ನಾಯಕ, ಹಿಂದುಗಳ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಯಮುನಪ್ಪ, ಸಮಾಜದ ಮುಖಂಡರಾದ ಕೆ.ಶಾಂತಪ್ಪ, ಶ್ರೀನಿವಾಸ ಪೋತಗಲ್, ಶರಣಪ್ಪ ಕಡಗೋಲ್, ಬಿ.ಬಸವರಾಜ, ವಿಜಯ ಭಾಸ್ಕರ್ ಸೇರಿದಂತೆ ವಿವಿಧ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಉದ್ಯೋಗ ಮಾರುಕಟ್ಟೆಯಲ್ಲಿ ಯಶಸ್ವಿ ಆಗಬೇಕೆಂದರೆ ಉತ್ತಮ ಬಾಷಾ ಕೌಶಲ್ಯ ಬೆಳೆಸಿಕೊಂಡಾಗ ಮಾತ್ರ ಸಾಧ್ಯ:ಪ್ರೊ ಅಂಜನಪ್ಪ

ದಾವಣಗೆರೆ: ವಿದ್ಯಾರ್ಥಿಗಳು ಉದ್ಯೋಗ ಮಾರುಕಟ್ಟೆಯಲ್ಲಿ ಯಶಸ್ವಿ ಆಗಬೇಕೆಂದರೆ ಅದಕ್ಕೆ ತಕ್ಕಂತಹ ಉತ್ತಮ ಬಾಷಾ ಕೌಶಲ್ಯ ಗಳನ್ನು ಬೆಳೆಸಿಕೊಂಡಾಗ ಅದು ಸಾಧ್ಯವಾಗುತ್ತದೆ ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಉದ್ಯೋಗ ಮಾರುಕಟ್ಟೆಗೆ ಸದೃಢಗೊಳ್ಳುವಲ್ಲಿ ಬೇಕಾಗುವ ಎಲ್ಲಾ ರೀತಿಯ ಕೌಶಲ್ಯಗಳನ್ನು ಒದಗಿಸುತ್ತದೆ ಎಂದು ಹೇಳಿದರು.

ಪ್ರತಿ ವರ್ಷ ಕಾಲೇಜಿನಲ್ಲಿ ೬೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದರ ಪ್ರಯೋಜನವನ್ನು ಪಡೆದುಕೊಳ್ಳುತ್ತಿದ್ದಾರೆ ಆ



ಅಂಜನಪ್ಪ ರವರು ಹೇಳಿದರು.

ಅವರು ಇಂದು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸ್ನಾತಕೋತ್ತರ ಉದ್ಯೋಗ ಮತ್ತು ಕೌಶಲ್ಯ ಕೋಶದ ವತಿಯಿಂದ ಅಂತಿಮ ಎಂ ಕಾಂ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಉನ್ನತಿ ಫೌಂಡೇಶನ್ ೩೦ ದಿನಗಳ ಕೌಶಲ ಅಭಿವೃದ್ಧಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಉದ್ಯೋಗ ಮಾರುಕಟ್ಟೆ ಎಂಬುದು ಕೌಶಲ್ಯಗಳ ಆಧಾರದ ಮೇಲೆ ಅವಲಂಬಿತವಾಗಿದೆ ಪ್ರತಿಯೊಬ್ಬ ವಿದ್ಯಾರ್ಥಿಗಳಿಗೆ ಭಾಷೆ ಯಾವುದಾದರೂ ಪರವಾಗಿಲ್ಲ ಅದರ ಪ್ರಭುತ್ವ ಸಾಧಿಸುವುದು ತುಂಬಾ ಮುಖ್ಯ ಹಾಗಾಗಿ ಈ ತರಹದ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಅವುಗಳನ್ನು ಗಳಿಸಿಕೊಂಡರೆ ನೀವು ಯಶಸ್ವಿ ವ್ಯಕ್ತಿಯಾಗಲು ಸಾಧ್ಯ ಎಂದು ಹೇಳಿದರು. ಸಂವಹನ ಕೌಶಲ್ಯ ಕಲಿಕೆ ಸಂದರ್ಶನ ಎದುರಿಸುವಿಕೆ ಇಂಥ ಮುಂತಾದ ಕೌಶಲ್ಯಗಳನ್ನು ಈ ತರಹದ ಕಾರ್ಯಕ್ರಮಗಳಿಂದ ಕಾಲೇಜಿನಲ್ಲಿ ಆಯೋಜನೆ ಮಾಡಿದಾಗ ಅದರ ಪ್ರಯೋಜನ ಪಡೆದುಕೊಂಡು ಯಶಸ್ವಿಯಾಗಲು ಕರೆ ನೀಡಿದರು.

ಪ್ಲೇಸ್ಮೆಂಟ್ ಸೆಲ್ ನ ಸಂಚಾಲಕರಾದ ಪ್ರೊ ವೆಂಕಟೇಶ ಬಾಬುರವರು ಮಾತನಾಡುತ್ತಾ ಉನ್ನತಿ ಫೌಂಡೇಶನ್ ಪ್ರತಿವರ್ಷ ಕಾಲೇಜಿನಲ್ಲಿ ೩೦ ದಿನಗಳ ಕಾರ್ಯಾಗಾರವನ್ನು ಹಮ್ಮಿಕೊಂಡಿರುತ್ತೇದೆ ಈ ಕಾರ್ಯಗಾರದಲ್ಲಿ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಉದ್ಯೋಗ ಕೌಶಲ್ಯ ತರಬೇತಿಗಳು ಜೀವನ ಕೌಶಲ್ಯ ತರಬೇತಿಗಳನ್ನು ನೀಡಲಾಗುತ್ತದೆ. ವಿದ್ಯಾರ್ಥಿಗಳು ಕಲಿಕೆಯನ್ನು ಬರೀ ಪಾಠ ಪ್ರವಚನಗಳಿಂದ ಅಷ್ಟೇ ಅಲ್ಲದೆ ಚಟುವಟಿಕೆಗಳ ಮೂಲಕ ಗುಂಪು ಚರ್ಚೆಗಳ ಮೂಲಕ ಕ್ರಿಯಾತ್ಮಕವಾಗಿ ಕಲಿಯಬಹುದು ಎಂಬುದನ್ನು ಈ ಕಾರ್ಯಗಾರದ ಮೂಲಕ ಅವರಿಗೆ ಮನವರಿಕೆ ಮಾಡಿ ಮುಂದಿನ ವಿದ್ಯಾರ್ಥಿಗಳು ಉದ್ಯೋಗ ಮಾರುಕಟ್ಟೆಯಲ್ಲಿ ವಿವಿಧ ಕಂಪನಿಗಳಲ್ಲಿ ಉದ್ಯೋಗದಲ್ಲಿದ್ದಾರೆ ಎಂಬುದು ಹೆಮ್ಮೆಯ ಸಂಗತಿ. ಉನ್ನತಿ ಸಂಸ್ಥೆಯ ಸಂಪನ್ಮೂಲ ವ್ಯಕ್ತಿಗಳಾದ ಪವನ್ ರವರು ಮಾತನಾಡುತ್ತಾ ನಮ್ಮ ಸಂಸ್ಥೆಯು ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳಿಗೆ ಈ ತರಹದ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದೆ ಈ ತರ ಕಾರ್ಯಕ್ರಮಗಳು ಬೇರೆ ಖಾಸಗಿ ಕಾಲೇಜುಗಳ ವಿದ್ಯಾರ್ಥಿಗಳಿಗೋಸ್ಕರ ಆಯೋಜನೆ ಮಾಡುವುದಿಲ್ಲ ಸರ್ಕಾರವು ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಕೌಶಲ ಅಭಿವೃದ್ಧಿ ಕಾರ್ಯಗಾರಗಳನ್ನು ಮಾಡುತ್ತಿರುವುದು ಸ್ವಾಗತ. ವಿದ್ಯಾರ್ಥಿಗಳು ತಮಗೆ ಉತ್ತಮವಾಗಿ ಸ್ಪಂದಿಸಿ ಪ್ರಯೋಜನ ಪಡೆದುಕೊಂಡರು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾದ ಅಪೂರ್ವ ರವರು ಮಾತನಾಡುತ್ತಾ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ ಬಹು ಮುಖ್ಯವಾಗುತ್ತದೆ ಪ್ರತಿಯೊಬ್ಬ ವಿದ್ಯಾರ್ಥಿಗಳು ಉತ್ತಮವಾಗಿ ಪಾಲ್ಗೊಂಡರೆ ಏನನ್ನಾದರೂ ಕಲಿಯಲು ಸಾಧ್ಯ ಆಗ ಕ್ರಿಯಾತ್ಮಕತೆ ಹೊಸತನ ತಮ್ಮಲ್ಲಿ ಮೂಡಿ ಬರಲು ಅದು ಸಹಾಯವಾಗುತ್ತದೆ ಹಾಗಾಗಿ ಕಲಿಯುವಾಗ ಒಳಗೊಳ್ಳುವಿಕೆ ತುಂಬಾ ಅನುಕೂಲ ಮಾಡುತ್ತದೆ ಅದನ್ನು ಮುಂದೆ ರೂಡಿಸಿಕೊಳ್ಳಿ ಎಂದು ಸಲಹೆ ನೀಡಿದರು.ಕಾರ್ಯಕ್ರಮ ಕುರಿತು ವಿದ್ಯಾರ್ಥಿಗಳಾದ ಮಾರುತಿ ಸ್ವಪ್ನ ರಮೇಶ್ ರವಿ ಮಮತಾ ಸಹನಾ ಇವರುಗಳು ತಮ್ಮ ಅನಿಸಿಕೆಯನ್ನು ಹಂಚಿಕೊಂಡರು.

ಕಾರ್ಯಕ್ರಮವನ್ನು ವಿದ್ಯಾರ್ಥಿನಿ ನಾಗರತ್ನ ರವರು ನಿರೂಪಿಸಿದರು. ಮಧುರವರು ಸ್ವಾಗತಿಸಿದರು ರಾಹುಲ್ ರವರು ವಂದಿಸಿದರು ಅಶ್ವಿನಿ ಮತ್ತು ಸ್ವಾಮಿರವರು ಪ್ರಾರ್ಥನೆ ಗೀತೆಯನ್ನು ಹಾಡಿದರು. ಉಪನ್ಯಾಸಕರಾದ ದೇವೇಂದ್ರಪ್ಪ ರವರು ಹಾಗೂ ಇತರೆ ಎಲ್ಲಾ ಅಧ್ಯಾಪಕರು ಭಾಗವಹಿಸಿದ್ದರು.

Printed at:S.K.Wadeyar, Published by:S.K.Wadeyar, and Owned by:S.K.Wadeyar
Printed at:**SUCHITHRAPRINTERS & PUBLISHERS #378/379, "MAYAGAPPA COMPLEX"** 1se Stage 6th Phase Industrial Town west of chord Road Rajajinagar Bengaluru-56644.Karnataka.
Published at:#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-56644.Karnataka. Editor:S.K.Wadeyar,